# ಅನಂತ ಜನಶಕ್ತಿ

ಸಂಪಾದಕ: ಎಸ್.ವೆಂಕಟೇಸುಲು
EDITOR : S VENKATESULU

ANANTHA JANA SAKTHI KANNADA DAILY ಕನ್ನಡ ದಿನಪತ್ರಿಕೆ

ಸಂಪುಟ : 01 ಸಂಚಿಕೆ : 28 ರಿ.ನಂ : ಕೆಎನ್‌ಎಎನ್ / 26 / ಎ5487 ಬಳ್ಳಾರಿ ಮಂಗಳವಾರ ದಿನಾಂಕ : 04-08-2026 ಪುಟ : 04 ಬೆಲೆ : 2-00

## ರಾಜ್ಯದಲ್ಲಿ ಅಬ್ಬರದ ಮಳೆ ಭರ್ತಿ ಹಂತದಲ್ಲಿ ಜಲಾಶಯಗಳು

**ಬೆಂಗಳೂರು:** ರಾಜ್ಯದ ಹಲವೆಡೆ ಅಬ್ಬರದ ಮಳೆಯಾಗುತ್ತಿದೆ. ಜಲಾಶಯಗಳಲ್ಲಿ ಒಳಹರಿವು ಹೆಚ್ಚಾಗಿದ್ದು, ಭರ್ತಿ ಹಂತಕ್ಕೆ ತಲುಪಿವೆ. ಇತ್ತ ನದಿಗಳು ಮೈದುಂಬಿ ಹರಿಯುತ್ತಿದ್ದು, ಕೆಲವೆಡೆ ಜನಜೀವನ ಅಸ್ತವ್ಯಸ್ತವಾಗಿದೆ.

ಶಿವಮೊಗ್ಗದ ಶಿಕಾರಿಪುರದಲ್ಲಿರುವ ಕುಮುದ್ವತಿ ನದಿ ಆರ್ಭಟಿಸ್ತಿದೆ. ಇದರಿಂದಾಗಿ 21 ಅಡಿ ಎತ್ತರದ 1.82 ಟಿಎಂಸಿ ನೀರಿನ ಸಾಮರ್ಥ್ಯ ಹೊಂದಿರುವ ಅಂಜನಾಪುರ ಜಲಾಶಯ ಭರ್ತಿಯಾಗಿದೆ. ಹಾಸನ ಜಿಲ್ಲೆ ಮಲೆನಾಡು ಭಾಗದಲ್ಲಿ ವರುಣನ ಅಬ್ಬರ ಮುಂದುವರಿದಿದೆ. ಹೇಮಾವತಿ ಜಲಾಶಯಕ್ಕೆ ಒಳ ಹರಿವು ಹೆಚ್ಚಾಗಿದೆ. ಎರಡೇ ದಿನದಲ್ಲಿ 2.042 ಟಿಎಂಸಿ ನೀರು ಹರಿದು ಬಂದಿದೆ. ಹೇಮಾವತಿ ಜಲಾಶಯಕ್ಕೆ 12,859 ಕ್ಯೂಸೆಕ್ ಒಳಹರಿವಿದ್ದು, 500 ಕ್ಯೂಸೆಕ್ ಹೊರಬಿಡಲಾಗಿದೆ. 37.103 ಟಿಎಂಸಿ ನೀರು ಸಂಗ್ರಹ ಸಾಮರ್ಥ್ಯ ಹೊಂದಿರುವ ಹೇಮಾವತಿ ಡ್ಯಾಂನಲ್ಲಿ ಸದ್ಯ 28.022 ಟಿಎಂಸಿ ನೀರು ಸಂಗ್ರಹವಾಗಿದೆ.



## ಸಂಪುಟ ವಿಸ್ತರಣೆಯಲ್ಲಿ ಬಿಗ್ ಟ್ವಿಸ್ಟ್: ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದ

# 19 ಶಾಸಕರು; ಕೊನೆ ಕ್ಷಣದಲ್ಲಿ ಒಬ್ಬರಿಗೆ ಕೊಕ್!



**ಬೆಂಗಳೂರು:** ಕೊನೆಗೂ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ನೇತೃತ್ವದ ಸಚಿವ ಸಂಪುಟ ಸೋಮವಾರ ಸಂಜೆ ವಿಸ್ತರಣೆ-ಯಾಗಿದೆ. ಕಾಂಗ್ರೆಸ್ ಹೈಕಮಾಂಡ್ 20 ನೂತನ ಸಚಿವರ ಹೆಸರನ್ನು ಪ್ರಕಟಿಸಿತ್ತಾದರೂ ಕೊನೆ ಕ್ಷಣದಲ್ಲಿ 19 ಮಂದಿ ಮಾತ್ರ ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದ್ದಾರೆ.

ನಿನ್ನೆ ಸಂಜೆ 5 ಗಂಟೆಗೆ ಲೋಕಭವನದಲ್ಲಿ ನಡೆದ ಸಮಾರಂಭದಲ್ಲಿ ರಾಜ್ಯಪಾಲ ತಾವರ್‌ಚಂದ್ ಗೆಹ್ಲೋಟ್ ಅವರು 19 ಸಚಿವರಿಗೆ ಮಾತ್ರ ಪ್ರತಿಜ್ಞಾವಿಧಿ ಬೋಧಿಸಿದರು.

ಮೊದಲಿಗೆ ಮಾಜಿ ಮುಖ್ಯಮಂತ್ರಿ ದಿವಂಗತ ಧರ್ಮಸಿಂಗ್ ಅವರ ಪುತ್ರ ಡಾ. ಅಜಯ್ ಸಿಂಗ್ ಅವರು ಪ್ರಮಾಣವಚನ ಸ್ವೀಕರಿಸಿದರು. ಬಳಿಕ ಕ್ರಮವಾಗಿ ಎಚ್.ಸಿ.ಬಾಲಕೃಷ್ಣ, ಕೆ.ಎಸ್.ಬಸವಂತಪ್ಪ, ಬಸವರಾಜ್ ರಾಯರೆಡ್ಡಿ, ಎನ್. ಚಲುವರಾಯಸ್ವಾಮಿ, ಲಕ್ಷ್ಮಣ್ ಸವದಿ, ಮಧು ಬಂಗಾರಪ್ಪ, ಎಸ್. ಎಸ್.ಮಲ್ಲಿಕಾರ್ಜುನ್, ಬಿ.ನಾಗೇಂದ್ರ, ಪಿ.ಎಂ.ನರೇಂದ್ರಸ್ವಾಮಿ, ಸಿ.ಪುಟ್ಟರಂಗಶೆಟ್ಟಿ, ಟಿ.ರಘುಮೂರ್ತಿ, ರಿಜ್ವಾನ್ ಅರ್ಷದ್, ರುದ್ರಪ್ಪ ಲಮಾಣಿ, ಸಂತೋಷ್ ಲಾಡ್, ಶಿವಲಿಂಗೇಗೌಡ, ಶಿವರಾಜ್ ತಂಗಡಗಿ, ವಿಜಯಾನಂದ ಕಾಶಪ್ಪನವರ್, ಜಮೀರ್ ಅಹ್ಮದ್ ಖಾನ್ ಅವರು ಪ್ರಮಾಣವಚನ ಸ್ವೀಕರಿಸಿದರು.

ಇದಕ್ಕೂ ಮುನ್ನ, ಎಐಸಿಸಿ ಪ್ರಧಾನ ಕಾರ್ಯದರ್ಶಿ(ಸಂಘಟನೆ) ಕೆ.ಸಿ. ವೇಣುಗೋಪಾಲ್ ಅವರು ಸಿಎಂ ಶಿವಕುಮಾರ್ ಅವರಿಗೆ ಪತ್ರ ಬರೆದು, ಸಂಪುಟಕ್ಕೆ ಸೇರಿಸಿಕೊಳ್ಳಲು 20 ಸಚಿವರ ಹೆಸರುಗಳನ್ನು ಕಾಂಗ್ರೆಸ್ ಹೈಕಮಾಂಡ್ ಅನುಮೋದಿಸಿರುವ ಬಗ್ಗೆ ಮಾಹಿತಿ ನೀಡಿದ್ದರು.

ಆದಾಗ್ಯೂ, ಕಾಂಗ್ರೆಸ್ ಹೈಕಮಾಂಡ್ ಅನುಮೋದಿಸಿದ ಅಂತಿಮ ಪಟ್ಟಿಯಲ್ಲಿದ್ದ ಗಾಯತ್ರಿ ಶಾಂತೇಗೌಡ ಅವರು ಸೋಮವಾರ ಪ್ರಮಾಣವಚನ ಸ್ವೀಕರಿಸಲಿಲ್ಲ. ಇದರೊಂದಿಗೆ ಕರ್ನಾಟಕ ಸಚಿವ ಸಂಪುಟದಲ್ಲಿ ಮಹಿಳಾ ಪ್ರಾತಿನಿಧ್ಯ ಇಲ್ಲದಂತಾಗಿದೆ.

ಕೊನೇ ಕ್ಷಣದಲ್ಲಿ ನಡೆದ ದಿಢೀರ್ ರಾಜಕೀಯ ಬೆಳವಣಿಗೆಗಳಿಂದಾಗಿ ಈ ನಿರ್ಧಾರಕ್ಕೆ ಬರಲಾಗಿದ್ದು, ಮಹಿಳಾ ಶಾಸಕರ ನಡುವಿನ ತೀವ್ರ ಪೈಪೋಟಿಯೇ ಇದಕ್ಕೆ ಕಾರಣ ಎನ್ನಲಾಗಿದೆ. 20 ಮಂದಿ ನೂತನ ಸಚಿವರ ಪಟ್ಟಿಯಲ್ಲಿ ಗಾಯತ್ರಿ ಶಾಂತೇಗೌಡ ಅವರ ಹೆಸರಿತ್ತು. ಆದರೆ ಪ್ರಮಾಣವಚನ

**2ನೇ ಪುಟಕ್ಕೆ..**

### ಉಕ್ಕಿ ಹರಿಯುತ್ತಿರುವ ತುಂಗಭದ್ರಾ ನದಿ

## ಉಕ್ಕಡಗಾತ್ರಿ ದೇವಸ್ಥಾನದ ಸ್ನಾನಘಟ್ಟ ಮುಳುಗಡೆ



**ದಾವಣಗೆರೆ:** ತುಂಗಾ ಜಲಾಶಯದಿಂದ ಅಪಾರ ಪ್ರಮಾಣದ ನೀರನ್ನು ತುಂಗಭದ್ರಾ ನದಿಗೆ ಬಿಡಲಾಗಿದ್ದು, ನದಿ ಉಕ್ಕಿ ಹರಿಯುತ್ತಿದೆ. ಪರಿಣಾಮ ನದಿ ಪಾತ್ರದಲ್ಲಿರುವ ಹರಿಹರದ ಉಕ್ಕಡಗಾತ್ರಿ ದೇವಸ್ಥಾನದ ಸ್ನಾನಘಟ್ಟ ಮುಳುಗಡೆಯಾಗಿದೆ.
ಮಲೆನಾಡು ಭಾಗದಲ್ಲಿ ನಿರಂತರವಾಗಿ ಮಳೆಯಾಗುತ್ತಿದ್ದು, ತುಂಗಾ ಡ್ಯಾಮ್‌ಗೆ ಅಪಾರ ಪ್ರಮಾಣದ ನೀರು ಹರಿದು ಬರುತ್ತಿದೆ. 92,000 ಸಾವಿರ ಕ್ಯೂಸೆಕ್ ನೀರನ್ನು ನದಿಗೆ ಬಿಡಲಾಗಿದೆ.

**2ನೇ ಪುಟಕ್ಕೆ..**

### ರಾಮ ಮಂದಿರ ನಿರ್ಮಾಣವನ್ನೇ ವಿರೋಧಿಸಿದ್ದವರು

## ದೇಣಿಗೆ ಬಗ್ಗೆ ಪ್ರಶ್ನೆ ; ಯೋಗಿ ವಾಗ್ದಾಳಿ

**ಲಖನೌ:** ಅಯೋಧ್ಯೆ ರಾಮ ಮಂದಿರಕ್ಕೆ ಬಂದ ದೇಣಿಗೆಯಲ್ಲಿ ಅಕ್ರಮ ನಡೆದಿದೆ ಎಂಬ ವಿರೋಧ ಪಕ್ಷಗಳ ಆರೋಪಕ್ಕೆ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ತೀವ್ರ ತಿರುಗೇಟು ನೀಡಿ-ದ್ದಾರೆ. ರಾಮ ಮಂದಿರ ನಿರ್ಮಾಣವನ್ನೇ ಹಿಂದೆ ವಿರೋಧಿಸಿದ್ದವರು ಈಗ ದೇಣಿಗೆ ವಿಚಾರವನ್ನು ಮುಂದಿಟ್ಟುಕೊಂಡು ರಾಜಕೀಯ ಮಾಡುತ್ತಿದ್ದಾರೆ ಎಂದು ಆರೋಪಿಸಿದ ಅವರು, ಅವರ ದ್ವಂದ್ವ ನಿಲುವನ್ನು ದೇಶವೇ ನೋಡುತ್ತಿದೆ ಎಂದು ವಾಗ್ದಾಳಿ ನಡೆಸಿದ್ದಾರೆ. ಉತ್ತರ ಪ್ರದೇಶ ವಿಧಾನಮಂಡಲದ ಮುಂಗಾರು ಅಧಿವೇಶನ ಆರಂಭಕ್ಕೂ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಯೋದ- ್ಯೆ ವಿಚಾರವನ್ನು ಎತ್ತುತ್ತಿರುವವರು ಈ ಹಿಂದೆ ರಾಮಭಕ್ತರ ಮೇಲೆ ಗುಂಡು ಹಾರಿಸಿದ್ದವರು. 'ಜೈ ಶ್ರೀರಾಮ್' ಘೋಷಣೆ ಕೂಗಿದವರ ಮೇಲೆ ಲಾಠಿ ಚಾರ್ಜ್ ಮತ್ತು ಗುಂಡಿನ ದಾಳಿ ನಡೆಸಿದವರೇ ಈಗ ರಾಮ ಮಂದಿರದ ಬಗ್ಗೆ ಮಾತನಾಡುತ್ತಿದ್ದಾರೆ ಎಂದು, ಯಾವುದೇ ಪಕ್ಷದ ಹೆಸರನ್ನು ಉಲ್ಲೇಖಿಸದೆ ವಾಗ್ದಾಳಿ ನಡೆಸಿದರು. ರಾಮ ಮಂದಿರ ನಿರ್ಮಾಣಕ್ಕಾಗಿ ಬಂದ ದೇಣಿಗೆಯಲ್ಲಿ ಅಕ್ರಮ ನಡೆದಿದೆ ಎಂದು ಆರೋಪಿಸುತ್ತಿರುವವರು, ದೇವಸ್ಥಾನ ನಿರ್ಮಾಣಕ್ಕೆ ಒಂದು ರೂಪಾಯಿಯನ್ನೂ

**2ನೇ ಪುಟಕ್ಕೆ..**



### ನಾನು ರಾಜೀನಾಮೆ ಬೆದರಿಕೆ ಹಾಕಿಲ್ಲ:

## ಎಸ್‌ಎಸ್ ಮಲ್ಲಿಕಾರ್ಜುನ್ ಸ್ಪಷನೆ



**ಬೆಂಗಳೂರು:** ರಾಜ್ಯ ಕಾಂಗ್ರೆಸ್ ಸರ್ಕಾರದಲ್ಲಿ ಸಚಿವಾಕಾಂಕ್ಷಿಗಳ ಪಟ್ಟಿ ಕೊನೆ ಕ್ಷಣದಲ್ಲಿ ಬದಲಾದ ವಿಚಾರ ಹಾಗೂ ಪಕ್ಷದ ಒಳಗಿನ ಗೊಂದಲಗಳ ಕುರಿತು ಹೊಸ ಪಟ್ಟಿಯಲ್ಲಿ ಸ್ಥಾನ ಪಡೆದಿರುವ ದಾವಣಗೆರೆಯ ಶಾಸಕ ಎಸ್‌ಎಸ್ ಮಲ್ಲಿಕಾರ್ಜುನ್ ಸ್ಪಷ್ಟನೆ ನೀಡಿದ್ದಾರೆ.

ಪಟ್ಟಿಯಲ್ಲಿ ಕೊನೆ ಕ್ಷಣದಲ್ಲಿ ಯಾಕೆ ಬದಲಾವಣೆ ಆಯ್ತು ಎಂಬುದು ನನಗೆ ಗೊತ್ತಿಲ್ಲ. ಮುಖ್ಯಮಂತ್ರಿಗಳು ನಿನಗೆ ಅವಕಾಶ ನೀಡಲಾಗಿದೆ, ನೀನು ಬಾ ಎಂದು ಕರೆದರು, ಹಾಗಾಗಿ ಬಂದಿದ್ದೇನೆ. ಮಂಕಾಳು ವೈದ್ಯ ಅವರ ಹೆಸರು ತಪ್ಪಾಗಿ (ಬೈ ಮಿಸ್ಟೇಕ್) ಬಂದಿತ್ತು ಎಂದು ತಿಳಿಸಿದರು.

ಮಂತ್ರಿ ಸ್ಥಾನ ನೀಡದಿದ್ದರೆ ನೀವು ರಾಜೀನಾಮೆ ನೀಡುವ ಬೆದರಿಕೆ ಹಾಕಿದ್ರಾ ಎಂಬ ಮಾಧ್ಯಮಗಳ ಪ್ರಶ್ನೆಗೆ, ಸಚಿವ ಸ್ಥಾನಕ್ಕಾಗಿ ನಾನು ಯಾವುದೇ ರಾಜೀನಾಮೆ

**2ನೇ ಪುಟಕ್ಕೆ..**

### ಆ.10ರೊಳಗೆ ತುಂಗಭದ್ರಾ ಕಾಲುವೆಗಳಿಗೆ ನೀರು ಹರಿಸಿ

## ದರೂರ್ ಪುರುಷೋತಮ್ ಗೌಡ ಆಗ್ರಹ



ಬಳ್ಳಾರಿ : ತುಂಗಭದ್ರಾ ಜಲಾಶಯದಿಂದ ಆಗಸ್ಟ್ 10ರೊಳಗೆ ಎಲ್ಲಾ ನೀರಾವರಿ ಕಾಲುವೆಗಳಿಗೆ ನೀರು ಹರಿಸಿ ಮುಂಗಾರು ಹಂಗಾಮಿನ ಕೃಷಿ ಚಟುವಟಿಕೆಗಳಿಗೆ ಯಾವುದೇ ಅಡಚಣೆ ಉಂಟಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ತುಂಗಭದ್ರಾ ರೈತ ಸಂಘದ ರಾಜ್ಯಾಧ್ಯಕ್ಷ ದರೂರ್ ಪುರುಷೋತಮ್ ಗೌಡ ರಾಜ್ಯ ಸರ್ಕಾರವನ್ನು ಆಗ್ರಹಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿರುವ ಪತ್ರಿಕಾ ಭವನದಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರ ತುರ್ತಾಗಿ ನೀರಾವರಿ ಸಲಹಾ ಸಮಿತಿ (ಐಸಿಸಿ) ಸಭೆಯನ್ನು ಕರೆಯಬೇಕು ಎಂದು ಒತ್ತಾಯಿಸಿದರು. ಮುಖ್ಯಮಂತ್ರಿ ಹಾಗೂ ಜಲಸಂಪನ್ಮೂಲ ಸಚಿವ ಡಿ.ಕೆ. ಶಿವಕುಮಾರ್, ತುಂಗಭದ್ರಾ ಮಂಡಳಿ ಅಧಿಕಾರಿಗಳು ಮತ್ತು ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ರೈತರ ಹಿತದೃಷ್ಟಿಯಿಂದ ತಕ್ಷಣ ನಿರ್ಧಾರ ಕೈಗೊಂಡು ನೀರಾವರಿ ಕಾಲುವೆಗಳಿಗೆ ನೀರು ಬಿಡುಗಡೆ ಮಾಡಬೇಕೆಂದು ಮನವಿ ಮಾಡಿದರು.

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಉತ್ತಮ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ರೈತರು ಭತ್ತ ಸೇರಿದಂತೆ ಮುಂಗಾರು ಹಂಗಾಮಿನ ವಿವಿಧ ಬೆಳೆಗಳ ನಾಟಿ ಮತ್ತು ಬಿತ್ತನೆ ಕಾರ್ಯವನ್ನು ಆರಂಭಿಸಿದ್ದಾರೆ. ಇಂತಹ ಸಂದರ್ಭದಲ್ಲಿ ಕಾಲುವೆಗಳಿಗೆ ಸಮಯಕ್ಕೆ ಸರಿಯಾಗಿ ನೀರು ಹರಿಯದಿದ್ದರೆ ಬೆಳೆಗಳ ಬೆಳವಣಿಗೆಗೆ ತೀವ್ರ ತೊಂದರೆಯಾಗಲಿದೆ. ಆರಂಭಿಕ ಹಂತದಲ್ಲೇ

**2ನೇ ಪುಟಕ್ಕೆ...**

### ಕಾವೇರಿ ವಿವಾದ: ನೀರು ಬಿಟ್ಟರೂ ಕರ್ನಾಟಕದ ವಿರುದ್ಧ

## ಸುಪ್ರೀಂ ಮೆಟ್ಟಿಲೇರಿದ ತಮಿಳುನಾಡು

**ಚೆನ್ನೈ:** ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಮತ್ತು ಕಾವೇರಿ ನೀರು ನಿಯಂತ್ರಣ ಸಮಿತಿ ಆದೇಶಗಳನ್ನು ಪಾಲಿಸಲು ಕರ್ನಾಟಕ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿ, ತಮಿಳುನಾಡು ಸರ್ಕಾರ ಸೋಮವಾರ ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿದೆ. ಅಧಿಕೃತ ಪ್ರಕಟಣೆ-ಯ ಪ್ರಕಾರ, ಮತ್ತು CWRC ನಿರ್ದೇಶನಗಳನ್ನು ನೀಡಿ-ದ್ದರೂ ಕರ್ನಾಟಕವು ಕಡ್ಡಾಯವಾಗಿ ತಮಿಳುನಾಡಿಗೆ ಬಿಡಬೇಕಾದ ನೀರು ಬಿಡಲು ವಿಫಲವಾಗಿದೆ. ಹೀಗಾಗಿ ತಮಿಳುನಾಡು ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ಅವರ ಸೂಚನೆಯ ಮೇರೆಗೆ ಸೋಮವಾರ ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಲಾಗಿದೆ. ಜುಲೈ 28, 2026 ರಂದು ನಡೆದ ತನ್ನ 139ನೇ ಸಭೆಯಲ್ಲಿ, ಕಾವೇರಿ ಜಲಾನಯನ ಪ್ರದೇಶದ ಜಲವಿಜ್ಞಾನ ಮತ್ತು ಹವಾಮಾನ ಪರಿಸ್ಥಿತಿಗಳನ್ನು ನಿರ್ಣಯಿಸಿದ ನಂತರ, ಕರ್ನಾಟಕವು ಜುಲೈ 29 ರಿಂದ ಆಗಸ್ಟ್ 12, 2026 ರವರೆಗೆ ಕೃಷ್ಣ ರಾಜ ಸಾಗರ(ಕೆಆರ್‌ಎಸ್) ಮತ್ತು ಕಬಿನಿ ಜಲಾಶಯಗಳಿಂದ ಬಿಳಿಗುಂಡ್ಲುವಿಗೆ 3,500 ಕ್ಯೂಸೆಕ್ ನೀರು ಬಿಡುಗಡೆ ಮಾಡುವಂತೆ ನಿರ್ದೇಶಿಸಿತ್ತು. ನಂತರ ಜುಲೈ 30 ರಂದು ನಡೆದ ಸಿಡಬ್ಲ್ಯೂಎಂಎಯ 54 ನೇ ತುರ್ತು ಸಭೆಯಲ್ಲಿ ಈ ನಿರ್ಧಾರವನ್ನು ಅನುಮೋದಿಸಲಾಯಿತು.

ಆದಾಗ್ಯೂ, ಜುಲೈ 29 ಮತ್ತು ಆಗಸ್ಟ್ 2 ರ ನಡುವೆ, ಬಿಳಿಗುಂಡ್ಲುವಿನ ನಿಜವಾದ ಒಳಹರಿವು 158 ರಿಂದ 550 ಕ್ಯೂಸೆಕ್‌ಗಳ ನಡುವೆ ಮಾತ್ರ ಇತ್ತು. ಇದು ಅಧಿಕಾರಿಗಳು



ಆದೇಶಿಸಿದ ಪ್ರಮಾಣಕ್ಕಿಂತ ಬಹಳ ಕಡಿಮೆ ಎಂದು ತಮಿಳುನಾಡು ಸರ್ಕಾರ ಹೇಳಿದೆ.

ಈಗ ಹೇಳಿರುವಷ್ಟು ನೀರನ್ನು ತಮಿಳುನಾಡಿಗೆ ನೀಡಲು ಕರ್ನಾಟಕದ ಜಲಾಶಯಗಳಲ್ಲಿ ಸಾಕಷ್ಟು ನೀರು ಲಭ್ಯವಿದೆ ಎಂದು ತಮಿಳುನಾಡು ಸರ್ಕಾರ ವಾದಿಸಿದ್ದು, ಆಗಸ್ಟ್ 3 ರ ಹೊತ್ತಿಗೆ, ಕೃಷ್ಣರಾಜ ಸಾಗರ ಜಲಾಶಯವು 23.078 ಟಿಎಂಸಿ, ಕಬಿನಿ 18.610 ಟಿಎಂಸಿ, ಹಾರಂಗಿ 7.827 ಟಿಎಂಸಿ ಮತ್ತು ಹೇಮಾವತಿ 28.022 ಟಿಎಂಸಿ ನೀರನ್ನು ಹೊಂದಿತ್ತು. ನಾಲ್ಕು ಜಲಾಶಯಗಳಲ್ಲಿ ಒಟ್ಟು ಸಂಗ್ರಹವು 77.537 ಟಿಎಂಸಿ ಆಗಿದ್ದು, ಇದರಲ್ಲಿ 67.517 ಟಿಎಂಸಿ ಬಳಸಬಹುದಾದ ನೀರು ಸೇರಿದೆ ಎಂದು ಹೇಳಿದೆ. ಕೆಆರ್‌ಎಸ್ ಮತ್ತು ಕಬಿನಿ ಜಲಾಶಯಗಳ ಜಲಾನಯನ ಪ್ರದೇಶಗಳಲ್ಲಿ ಭಾರೀ

**2ನೇ ಪುಟಕ್ಕೆ..**

# ಗ್ರಾಪಂ ಚುನಾವಣೆ ಮೀಸಲಾತಿ

## ಪರಿಷ್ಕರಣೆಗೆ ದಲಿತ ಮುಖಂಡರ ಆಗ್ರಹ



ತುಮಕೂರು : ಜಿಲ್ಲಾಡಳಿತ ಗ್ರಾಮ ಪಂಚಾಯಿತಿಯ ಮೀಸಲಾತಿ ಪ್ರಕಟಣೆ ಹೊರಡಿಸಿದ್ದು ಸಾಕಷ್ಟು ಗೊಂದಲದ ವಾತಾವರಣ ನಿರ್ಮಾಣ ವಾಗಿದೆ ಎಂದು ದಲಿತ ಸಂಘರ್ಷ ಸಮಿತಿ ತಾಲೂಕು ಸಂಚಾಲಕ ಕಡಬ ಶಂಕರ್ ತಿಳಿಸಿದರು. ನಗರದ ಪ್ರವಾಸಿ ಮಂದಿರದಲ್ಲಿ ದಲಿತ ಮುಖಂಡರು ಆಯೋಜಿಸಿದ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದರು. ತುಮಕೂರು ಜಿಲ್ಲೆಯ ಎಲ್ಲಾ ತಾಲೂಕು ವ್ಯಾಪ್ತಿಯ ದಲಿತರು ಹೆಚ್ಚು ಜನಸಂಖ್ಯೆ ಇರುವ ಕಡೆ ಮೀಸಲಾತಿ ನೀಡದೆ ದಲಿತ ಸಮುದಾಯಕ್ಕೆ ರಾಜ್ಯ ಸರ್ಕಾರ. ಚುನಾವಣೆ ಆಯೋಗ ಅನ್ಯಾಯ ಮಾಡಲು ಹೊರಟಿದೆ. ಕಳೆದ ಇಪತ್ತು ವರ್ಷ ಗಳಿಂದ ಮೀಸಲಾತಿ ಪಡೆಯುವಲ್ಲಿ ದಲಿತರು ವಂಚನೆಗೆ ಒಳಗಾಗುತ್ತ ಬಂದಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.

ಕುಂದರನಹಳ್ಳಿ ನಟರಾಜ್ ಮಾತನಾಡಿ ದಲಿತರು ಇರುವ ಬ್ಲಾಕ್ ಗಳಲ್ಲಿ ದಲಿತರಿಗೆ ಮೀಸಲಾತಿ ಲಭ್ಯ ವಾಗಿಲ್ಲ ಬದಲಾಗಿ ಹಿಂದೂಳಿದ ವರ್ಗ. ಸಾಮಾನ್ಯ. ಹೀಗೆ ಮೀಸಲಾತಿ ನಿಗದಿ ಪಡಿಸಲಾಗಿದೆ ಈ ಮೀಸಲಾತಿ ನಿಗದಿಯಿಂದ ದಲಿತರು ಚುನಾವಣೆಯಲ್ಲಿ ಸ್ಪರ್ಧೆ ಮಾಡಲು ಸಾಧ್ಯವಾಗುವುದಿಲ್ಲ ಎಲ್ಲಾ ರೀತಿಯಲ್ಲಿ ಶೋಷಣೆಗೆ ಒಳಗಾಗುತ್ತಿರುವ ನಾವು ಸ್ಥಳೀಯ ಚುನಾವಣೆಯಲೂ ಸಹ ಅವಕಾಶ ವಂಚಿತರಬೇಕಾಗಿದೆ. ಮೇಲ್ನೋಟಕ್ಕೆ ಇದು ಕೆಲ ರಾಜಕೀಯ ಮುಖಂಡರು ಉದ್ದೇಶ ಪೂರ್ವಕ ವಾಗಿ ಮೀಸಲಾತಿ ಬದಲಾವಣೆ ಮಾಡುವಲ್ಲಿ ಪಿತೂರಿ ಮಾಡಿದ್ದಾರೆ ಎಂಬುದು ಗಮರ್ನಗ ಸಂಗತಿ ಕೂಡಲೆ ಜಿಲ್ಲಾಡಳಿತ ಸಮಗ್ರವಾಗಿ ಪರಿಶೀಲನೆ ಮಾಡಿ ಗುಬ್ಬಿ ತಾಲೂಕಿನಲ್ಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ದಲಿತ ಕಾಲೋನಿಗಳ ಮಾಹಿತಿ ಮತ್ತು ಜನಸಂಖ್ಯೆ ಆಧಾರದ ಮೇಲೆ ಮೀಸಲಾತಿಯನ್ನು ಮತ್ತೊಮ್ಮೆ ಪರಿಶೀಲಿಸಿ ದಲಿತ ಸಮುದಾಯಕ್ಕೆ ಅನ್ಯಾಯ ವಾಗದಂತೆ ಮೀಸಲಾತಿ ನಿಗದಿ ಪಡಿಸಬೇಕು ಎಂದು ಒತ್ತಾಯಿಸಿ. ಈ ವೇಳೆಯಲ್ಲಿ ಮುಖಂಡರಾದ ಮಂಚಿಹಳ್ಳಿ ಶಿವಸ್ವಾಮಿ, ನಿಟ್ಟೂರು ನಾಗರಾಜ್, ನಾಗಭೂಷಣ್, ಕೆ.ಎಲ್. ರವಿಕುಮಾರ್, ಕೃಷ್ಣಪ್ಪ ಹರಿವೇಸಂದ್ರ, ನರೇಂದ್ರ, ಕೃಷ್ಣ ಸ್ವಾಮಿ, ಇತರರು ಹಾಜರಿದ್ದರು.

# ತುಮಕೂರಿನಲ್ಲಿ ಹೋಟೆಲ್ ಮಾಲೀಕರ ಸಂಘದ 50ನೇ ವರ್ಷದ ಸುವರ್ಣ ಮಹೋತ್ಸವ ಸಂಭ್ರಮ

ತುಮಕೂರು : ನಗರದ ಹೋಟೆಲ್ ಮತ್ತು ಉಪಹಾರ ಮಂದಿರಗಳ ಸಂಘ ಹಾಗೂ ಹೋಟೆಲ್ ಮಾಲೀಕರ ಪತ್ತಿನ ಸೌಹಾರ್ದ ಸಂಘದ ವತಿಯಿಂದ ಸಂಘದ 50ನೇ ವರ್ಷದ ಸುವರ್ಣ ಮಹೋತ್ಸವವನ್ನು ಇಂದು ಅದ್ದೂರಿಯಾಗಿ ಆಚರಿಸಲಾಯಿತು. ನಗರದ ವಿವಿಧ ಭಾಗಗಳಿಂದ ಆಗಮಿಸಿದ್ದ ಹೋಟೆಲ್ ಉದ್ಯಮಿಗಳು, ಸಿಬ್ಬಂದಿ ಹಾಗೂ ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿ ಅರ್ಧ ಶತಮಾನದ ಸುದೀರ್ಘ ಪಯಣವನ್ನು ಸಂಭ್ರಮಿಸಿದರು.

ಕಾರ್ಯಕ್ರಮವನ್ನು ಗಣ್ಯರು ಸಾಂಪ್ರದಾಯಿಕವಾಗಿ ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿದರು. ಬಳಿಕ ಸಂಘದ ಐವತ್ತು ವರ್ಷಗಳ ಸೇವಾ ಪಯಣ, ಸಾರ್ವಜನಿಕರಿಗೆ ನೀಡಿರುವ ಗುಣಮಟ್ಟದ ಸೇವೆ ಹಾಗೂ ಹೋಟೆಲ್ ಉದ್ಯಮಿಗಳ ಮತ್ತು ಕಾರ್ಮಿಕರ ಹಿತರಕ್ಷಣೆಗೆ ಸಂಘ ನೀಡಿರುವ ಕೊಡುಗೆಗಳನ್ನು ಸ್ಮರಿಸಲಾಯಿತು.

ಸಂಘವನ್ನು ಕಟ್ಟಿಬೆಳೆಸಿದ ಹಿರಿಯ ಮಾರ್ಗದರ್ಶಕರು, ಹೋಟೆಲ್ ಕ್ಷೇತ್ರದಲ್ಲಿ ಸುದೀರ್ಘ ಸೇವೆ ಸಲ್ಲಿಸಿದ ಹಿರಿಯ ಉದ್ಯಮಿಗಳು ಹಾಗೂ ಸದಸ್ಯರನ್ನು ಇದೇ ಸಂದರ್ಭದಲ್ಲಿ ಶಾಲು ಹೊದಿಸಿ, ಫಲಕ ನೀಡಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಸಂಘದ ಪದಾಧಿಕಾರಿಗಳು, "ಕಳೆದ 50 ವರ್ಷಗಳಿಂದ ಸದಸ್ಯರ ಒಗ್ಗಟ್ಟು, ಸಾರ್ವಜನಿಕರ ವಿಶ್ವಾಸ ಮತ್ತು ಸಹಕಾರದಿಂದ ಸಂಘವು ನಿರಂತರವಾಗಿ ಬೆಳೆಯುತ್ತ ಬಂದಿದೆ.

ಸುವರ್ಣ ಮಹೋತ್ಸವವು ನಮ್ಮ ಸಂಘದ ಸೇವಾ ಮನೋಭಾವ ಹಾಗೂ ಸೌಹಾರ್ದತೆಯ ಪ್ರತೀಕವಾಗಿದೆ.

ಮುಂದಿನ ದಿನಗಳಲ್ಲಿಯೂ ಹೋಟೆಲ್ ಉದ್ಯಮದ ಅಭಿವೃದ್ಧಿ ಮತ್ತು ಸದಸ್ಯರ ಹಿತರಕ್ಷಣೆಗೆ ಬದ್ಧವಾಗಿ ಕಾರ್ಯನಿರ್ವಹಿಸುತ್ತೇವೆ" ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಂಘದ ಅಧ್ಯಕ್ಷ ವಾಸುದೇವ ಶೆಟ್ಟಿ, ಉಪಾಧ್ಯಕ್ಷ ಟಿ.ಜಿ. ವೇದಮೂರ್ತಿ, ಪ್ರಧಾನ ಕಾರ್ಯದರ್ಶಿ ಕೆ.ಟಿ. ಗುರುಪ್ರಕಾಶ್ ಬಳ್ಳಕ್ಕುರಾಯ, ಸಂಘದ ಇತರ ಪದಾಧಿಕಾರಿಗಳು, ಕಾರ್ಯದರ್ಶಿಗಳು, ಸದಸ್ಯರು ಹಾಗೂ ಹೋಟೆಲ್ ಉದ್ಯಮಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸುವರ್ಣ ಮಹೋತ್ಸವವನ್ನು ಯಶಸ್ವಿಗೊಳಿಸಿದರು.



ತುಮಕೂರಿನಲ್ಲಿ ಹೋಟೆಲ್ ಮತ್ತು ಉಪಹಾರ ಮಂದಿರಗಳ ಸಂಘದ 50ನೇ ವರ್ಷದ ಸುವರ್ಣ ಮಹೋತ್ಸವ ಕಾರ್ಯಕ್ರಮದಲ್ಲಿ ಹಿರಿಯರನ್ನು ಸನ್ಮಾನಿಸುತ್ತಿರುವುದು.

# ಆಂಜನೇಯ ಸ್ವಾಮಿ ದೇವಸ್ಥಾನ ಜೀರ್ಣೋದ್ಧಾರಕ್ಕೆ 65 ಲಕ್ಷ ಅನುದಾನ-ಶಾಸಕ ನೇಮಿರಾಜ್ ನಾಯ್ಕ



ಕೊಟ್ಟೂರು : ಹಗರಿಬೊಮ್ಮನಹಳ್ಳಿಯ ವಿಧಾನಸಭಾ ಕ್ಷೇತ್ರದ ಶಾಸಕ ಕೆ ನೇಮಿರಾಜನಾಯ್ಕ ಕೊಟ್ಟೂರು ತಾಲೂಕಿನ ದೂಪದಹಳ್ಳಿ ಗ್ರಾಮದಲ್ಲಿ ಏರ್ಪಡಿಸಿದ್ದ ಶ್ರೀ ಆಂಜನೇಯ ದೇವಸ್ಥಾನ ಜೀರ್ಣೋದ್ಧಾರ ಪೂರ್ವಾ ಸಿದ್ದತಾ ಸಭೆಯಲ್ಲಿ ಭಾಗವಹಿಸಿ ಇದೇ ವರ್ಷ ಶಾಸಕರ ವಿವೇಚನ ಕೋಟ ಅಡಿಯಲ್ಲಿ ಸುಮಾರು 65 ಲಕ್ಷ ಅನುದಾನವನ್ನು ನೀಡುವುದಾಗಿ ಭರವಸೆ ನೀಡಿದರು. ದೂಪದಹಳ್ಳಿ ಗ್ರಾಮದ ಜೆಡಿಎಸ್ ಕಾರ್ಯಕರ್ತರು ನಿಮ್ಮ ಕ್ರಿಯಾಸೀಲ ನಾಯಕತ್ವ ಜನಪರ ಕಾಳಜಿ ಮತ್ತು ಶ್ರಮ ಜೀವನದ ಮನೋಭಾವದಿಂದಾಗಿ ನಮ್ಮ ಕ್ಷೇತ್ರದ ಅಭಿವೃದ್ಧಿಯಲ್ಲಿ ಹೊಸ ಅಧ್ಯಾಯ ಆರಂಭವಾಗಿದೆ ವಿಶಾಲ ದೃಷ್ಟಿಕೋನ ಹಾಗೂ ಜನಸಾಮಾನ್ಯರ ಧ್ವನಿಯಾಗಿ ನೀವು ಮಾಡುತ್ತಿರುವ ಸೇವೆ ಪ್ರಶಂಸನೀಯ ತಮ್ಮ ನಿಸ್ವಾರ್ಥ ಸೇವೆ ಹಾಗೂ ಕ್ಷೇತ್ರದ ಏಳಿಗೆಗಾಗಿ ನೀವು ತೋರುತ್ತಿರುವ ಬದ್ಧತೆಯನ್ನು ಸ್ಮರಿಸಬಹುದು ಈ ಮೂಲಕ ದೂಪದಹಳ್ಳಿ ಯಲ್ಲಿ ಶ್ರೀ ಆಂಜನೇಯ ಸ್ವಾಮಿಯ ದೇವಸ್ಥಾನವನ್ನು ಪುನರ್ ನಿರ್ಮಾಣ ಮಾಡಲು ತಮ್ಮ ತನು–ಮನ ಸಹಾಯದಿಂದ ದೇವಸ್ಥಾನದ ಮೇಲೆ ಅಪಾರವಾದ ಗೌರವ ಇಟ್ಟಿರುವುದಕ್ಕೆ ಅದರ ಜೊತೆಗೆ ದೇವಸ್ಥಾನ ಜೀರ್ಣೋದ್ಧಾರಕ್ಕೆ ತಮ್ಮ ಸಹಕಾರ ಸಹಾಯ ಹೀಗೆ ಇರಬೇಕೆಂದು ಊರಿನ ಪ್ರಮುಖ ಮುಖಂಡರು ಮನಪೂರ್ವಕವಾಗಿ ಬಹಳ ಹರ್ಷದಿಂದ ಖುಷಿಯನ್ನು ವ್ಯಕ್ತಪಡಿಸಿದ್ದಾರೆ. ಈ ಸಂದರ್ಭದಲ್ಲಿ ಎಂ ಎಂ ಜೆ ಶೋಬಿತ್, ತಳವಾರ್ ನಾಗರಾಜ್ ಜಿ ಸುರೇಶ್ ಸಿಟಿ ರಾಜು ಪ್ರಕಾಶ್ ಹೋಟೆಲ್ ಸಿದ್ದರಾಜು, ಬಿ ಜಿ ಬಡಿಗೇರ್, ದೂಪದಲ್ಲಿ ಗ್ರಾಮದ ಜೆಡಿಎಸ್ ಕಾರ್ಯಕರ್ತರು ಶಾಸಕರು ಆಪ್ತರು ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.



## ಸಂಪುಟ ವಿಸ್ತರಣೆಯಲ್ಲಿ ಬಿಗ್ ಟ್ವಿಸ್ಟ್: ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದ

# 19 ಶಾಸಕರು; ಕೊನೆ ಕ್ಷಣದಲ್ಲಿ ಒಬ್ಬರಿಗೆ ಕೊಕ್!

ಸ್ವೀಕರಿಸಲು ಸಿಎಂ ಕಡೆಯಿಂದ ಅವರಿಗೆ ಯಾವುದೇ ಕರೆ ಬಂದಿಲ್ಲ. ಪರಿಷತ್ ಸದಸ್ಯೆಯಾಗಿ ಗಾಯತ್ರಿ ಇನ್ನೂ ಪ್ರಮಾಣ ಸ್ವೀಕರಿಸಿದ ಕಾರಣ ಪಕ್ಷದಲ್ಲಿ ಈ ಬಗ್ಗೆ ಅಸಮಾಧಾನ ಭುಗಿಲೆದ್ದ ಕಾರಣ, ಪಕ್ಷ ಈ ತೀರ್ಮಾನ ಕೈಗೊಂಡಿರುವ ಮಾಹಿತಿ ಇದೆ. ಮಹಿಳಾ ಸಚಿವ ಸ್ಥಾನಕ್ಕೆ ಗಾಯತ್ರಿ ಅವರ ಹೆಸರು ಘೋಷಣೆ ನಡುವೆಯೂ ಲಕ್ಷ್ಮೀ ಹೆಬ್ಬಾಳ್ಕರ್ ಉಮಾಶ್ರೀ ನಡುವೆ ತೀವ್ರ ಪೈಪೋಟಿ ನಡೆದಿದೆ. ಹೀಗಾಗಿ ಮಾಜಿ ಸಿಎಂ ಸಿದ್ದರಾಮಯ್ಯನವರ ನಿವಾಸದಲ್ಲಿ ಮಹತ್ವದ ಸಭೆ ನಡೆಸಲಾಗಿದ್ದು, ಕೊನೆ ಕ್ಷಣದಲ್ಲಿ ಗಾಯತ್ರಿ ಹೆಸರು ಬಿಡಲೇಬೇಕು ಎಂಬ ರಾಜ್ಯ ನಾಯಕರ ಒತ್ತಡಕ್ಕೆ ಕಾಂಗ್ರೆಸ್ ವರಿಷ್ಠರು ಮಣಿದಿದ್ದಾರೆ.

# ದಿ ಸೆಂಟ್ರಲ್ ಕೋ ಆಫ್ ಹೋಲಸೇಲ್ ಸ್ಟೋರ್ಸ್ ನೂತನ ಕಟ್ಟಡದ ಅದ್ದೂರಿ ಉದ್ಘಾಟನೆ



ಹೊಳೆಆಲೂರು: ಗದಗ ಜಿಲ್ಲೆ ರೋಣ ತಾಲೂಕಿನ ಹೊಳೆಆಲೂರು ಪಟ್ಟಣದ ಎ.ಪಿ.ಎಂ.ಸಿ. ಯಾರ್ಡ್‌ನಲ್ಲಿ 'ದಿ ಸೆಂಟ್ರಲ್ ಕೋ–ಆಪ್. ಹೋಲ್‌ಸೇಲ್ ಸ್ಟೋರ್ಸ್' ಲಿಮಿಟೆಡ್‌ನ ನೂತನ ಕಟ್ಟಡದ ಉದ್ಘಾಟನಾ ಸಮಾರಂಭವು ಅತ್ಯಂತ ವಿಜೃಂಭಣೆಯಿಂದ ನೆರವೇರಿತು. ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಶ್ರೀ ಎಚ್ಚರೇಶ್ವರ ಸ್ವಾಮಿಗಳು ವಹಿಸಿ ಆಶೀರ್ವಚನ ನೀಡಿದರು. ನರಗುಂದ ವಿಧಾನಸಭಾ ಕ್ಷೇತ್ರದ ಶಾಸಕರು ಹಾಗೂ ಕರ್ನಾಟಕ ಸರ್ಕಾರದ ಮಾಜಿ ಸಚಿವರಾದ ಸಿ. ಸಿ. ಪಾಟೀಲ ಅವರು ಉದ್ಘಾಟಿಸಿ, ಸಂಸ್ಥೆಯ ಬೆಳವಣಿಗೆಗೆ ಹಾಗೂ ಸಾರ್ವಜನಿಕ ಸೇವೆಗೆ ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಧಾರವಾಡ ಕೆ.ಸಿ.ಸಿ. ಬ್ಯಾಂಕ್ ಅಧ್ಯಕ್ಷರಾದ ಶಿವಕುಮಾರಗೌಡ ಪಾಟೀಲ ಅವರು ವಿಶೇಷವಾಗಿ ಮಾತನಾಡಿ, "ಸಹಕಾರ ಕ್ಷೇತ್ರದಿಂದ ರೈತರಿಗೆ ಸಿಗುವ ಎಲ್ಲಾ ಸೌಲಭ್ಯಗಳನ್ನು ಪ್ರತಿಯೊಬ್ಬರೂ ಪಡೆದುಕೊಳ್ಳಬೇಕು. ನೂತನವಾಗಿ ನಿರ್ಮಾಣಗೊಂಡಿರುವ ಈ ಕಟ್ಟಡದ ಸದುಪಯೋಗವನ್ನು ರೈತರು ಹಾಗೂ ಸಾರ್ವಜನಿಕರು ಪಡೆದುಕೊಂಡು ಸಂಸ್ಥೆಯನ್ನು ಮತ್ತಷ್ಟು ಎತ್ತರಕ್ಕೆ ಬೆಳೆಸಬೇಕು" ಎಂದು ಕರೆ ನೀಡಿದರು. ವಿಧಾನ ಪರಿಷತ್ ಸದಸ್ಯರಾದ ಎಸ್. ವಿ. ಸಂಕನೂರ ಅವರು ಸಂಘದ ಸಂಸ್ಥಾಪಕರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಗೌರವ ಸಲ್ಲಿಸಿದರು. ಇದೇ ವೇಳೆ ಕುಂದಗೋಳ ಶಾಸಕರಾದ ಎಂ. ಆರ್. ಪಾಟೀಲ ಅವರು ಗಣ್ಯರಿಗೆ ಸನ್ಮಾನ ಕಾರ್ಯಕ್ರಮ ನೆರವೇರಿಸಿದರು.

ಸಮಾರಂಭದಲ್ಲಿ ಧಾರವಾಡ ಕೆ.ಸಿ.ಸಿ. ಬ್ಯಾಂಕ್ ಉಪಾಧ್ಯಕ್ಷರಾದ ನಿಂಗನಗೌಡ ಮರಿಗೌಡ, ಮಾಜಿ ಅಧ್ಯಕ್ಷರು, ಸ್ಥಳೀಯ ಮುಖಂಡರು ಹಾಗೂ ಸಂಘದ ಆಡಳಿತ ಮಂಡಳಿಯ ಸದಸ್ಯರು, ರೈತ ಬಾಂಧವರು ಮತ್ತು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.

# ಉಕ್ಕಿ ಹರಿಯುತ್ತಿರುವ ತುಂಗಭದ್ರಾ ನದಿ

## ಉಕ್ಕಡಗಾತ್ರಿ ದೇವಸ್ಥಾನದ ಸ್ನಾನಘಟ್ಟ ಮುಳುಗಡೆ

ಈ ಹಿನ್ನಲೆ ನದಿ ಪಾತ್ರದಲ್ಲಿ ಪ್ರವಾಹದ ಭೀತಿ ಎದುರಾಗಿದೆ. ಸ್ನಾನಘಟ್ಟದ ಪಕ್ಕದಲ್ಲಿರುವ 20ಕ್ಕೂ ಹೆಚ್ಚು ಅಂಗಡಿಗಳು ಮುಳುಗಡೆಯಾಗಿವೆ. ನದಿಪಾತ್ರದಲ್ಲಿ ನೀರಿನ ಮಟ್ಟ ಹೆಚ್ಚಾದ ಹಿನ್ನಲೆ ಅಂಗಡಿಗಳನ್ನು ಸ್ಥಳಾಂತರ ಮಾಡಲಾಗಿದೆ.

ನದಿಪಾತ್ರಕ್ಕೆ ಭಕ್ತರು ಹೋಗದಂತೆ ದೇವಸ್ಥಾನದ ಆಡಳಿತ ಮಂಡಳಿ ಎಚ್ಚರಿಕೆ ನೀಡಿದೆ. ದಾವಣಗೆರೆಯಲ್ಲಿ ಮಳೆಯಾಗುತ್ತಿಲ್ಲ, ಆದರೆ ಮಲೆನಾಡು ಭಾಗದಲ್ಲಿ ಉತ್ತಮ ಮಳೆಯಾಗುತ್ತಿರುವುದರಿಂದ ನದಿ ಮೈದುಂಬಿ ಹರಿಯುತ್ತಿದೆ.

# ರಾಮ ಮಂದಿರ ನಿರ್ಮಾಣವನ್ನೇ ವಿರೋಧಿಸಿದ್ದವರು ದೇಣಿಗೆ ಬಗ್ಗೆ ಪ್ರಶ್ನೆ ; ಯೋಗಿ ವಾಗ್ದಾಳಿ

ನೀಡಿಲ್ಲ. "ರಾಮ ಮಂದಿರ ನಿರ್ಮಾಣವನ್ನು ನ್ಯಾಯಾಲಯದ ಮೂಲಕ ತಡೆಯಲು ಪ್ರಯತ್ನಿಸಿದವರೇ ಇಂದು ದೇಣಿಗೆಯ ಬಗ್ಗೆ ಪ್ರಶ್ನೆ ಎತ್ತುತ್ತಿದ್ದಾರೆ. ಅವರ ದ್ವಂದ್ವ ನಿಲುವನ್ನು ದೇಶವೇ ನೋಡುತ್ತಿದೆ ಎಂದು ಟೀಕಿಸಿದರು. ಇದಕ್ಕೂ ಮುನ್ನ ಮುಂಗಾರು ಅಧಿವೇಶನದ ಮೊದಲ ದಿನ ಸಮಾಜವಾದಿ ಪಕ್ಷ (ಎಸ್‌ಪಿ) ಶಾಸಕರು ವಿಧಾನಸಭೆ ಎದುರು ಪ್ರತಿಭಟನೆ ನಡೆಸಿದರು. ಅಯೋಧ್ಯೆ ರಾಮ ಮಂದಿರ ದೇಣಿಗೆ ಅಕ್ರಮ ಆರೋಪ, ನೀಟ್ ಪ್ರಶ್ನೆಪತ್ರಿಕೆ ಸೋರಿಕೆ, ವಿದ್ಯುತ್ ಸಮಸ್ಯೆ ಹಾಗೂ ರಸಗೊಬ್ಬರ ಕೊರತೆ ಸೇರಿದಂತೆ ಹಲವು ವಿಚಾರಗಳನ್ನು ಮುಂದಿಟ್ಟು ಸರ್ಕಾರದ ವಿರುದ್ಧ ಘೋಷಣೆಗಳ ಕೂಗಿದರು. ಎಸ್‌ಪಿ ಹಿರಿಯ ನಾಯಕ ಶಿವಪಾಲ್ ಸಿಂಗ್ ಯಾದವ್, ಕೇವಲ ಮೂರು ದಿನಗಳ ಅಧಿವೇಶನ ಕರೆದಿರುವ ಸರ್ಕಾರ ಜನರ ಪ್ರಮುಖ ಸಮಸ್ಯೆಗಳ ಕುರಿತು ಚರ್ಚೆ ತಪ್ಪಿಸಲು ಯತ್ನಿಸುತ್ತಿದೆ ಎಂದು ಆರೋಪಿಸಿದರು. ರಾಜ್ಯದಲ್ಲಿ ಅನೇಕ ಸಮಸ್ಯೆಗಳಿವೆ. ಆದರೆ, ಸರ್ಕಾರ ಅವುಗಳ ಬಗ್ಗೆ ಚರ್ಚೆ ನಡೆಸಲು ಸಿದ್ಧವಿಲ್ಲ ಎಂದು ಕಿಡಿಕಾರಿದರು. ಪ್ರತಿಭಟನೆ ವೇಳೆ ಎಸ್‌ಪಿ ಶಾಸಕರು "ಚಂದಾ ಚೋರ್, ಗದ್ದಿ ಛೋಡ್" ಎಂಬ ಘೋಷಣೆಗಳನ್ನು ಕೂಗಿ ಬಿಜೆಪಿ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಉತ್ತರ ಪ್ರದೇಶ ಹಣಕಾಸು ಸಚಿವ ಸುರೇಶ್ ಖನ್ನಾ, ಯಾವುದೇ ಗಂಭೀರ ವಿಷಯವಿಲ್ಲದೆ ಸಮಾಜವಾದಿ ಪಕ್ಷ ವಿವಾದ ಸೃಷ್ಟಿಸಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದರು.

# ನಾನು ರಾಜೀನಾಮೆ ಬೆದರಿಕೆ ಹಾಕಿಲ್ಲ: ಎಸ್‌ಎಸ್ ಮಲ್ಲಿಕಾರ್ಜುನ್ ಸ್ಪಷನೆ

ಬೆದರಿಕೆ ಹಾಕಿಲ್ಲ. ಈ ಕುರಿತು ನನ್ನ ಬಳಿ ಯಾವುದೇ ಚರ್ಚೆಯೂ ಆಗಿಲ್ಲ ಎಂದು ಹೇಳಿದರು. ನಮ್ಮ ಜಿಲ್ಲೆ ಮತ್ತು ಜಾತಿಯ ಸಮೀಕರಣವನ್ನು ಪರಿಗಣಿಸಿ ನನಗೆ ಈ ಅವಕಾಶ ನೀಡಿದ್ದಾರೆ. ಕಾಂಗ್ರೆಸ್ ಸರ್ಕಾರದಲ್ಲಿ ಲಿಂಗಾಯತರು ಸೇರಿದಂತೆ ಎಲ್ಲಾ ಸಮುದಾಯಗಳಿಗೂ ಸಮಾನ ಪಾಲು ಮತ್ತು ಪ್ರಾತಿನಿಧ್ಯ ನೀಡಲಾಗಿದೆ ಎಂದರು.

ಪಕ್ಷದಲ್ಲಾಗಿರುವ ಅಸಮಾಧಾನ ಅಥವಾ ಲಿಸ್ಟ್ ಬದಲಾವಣೆ ವಿಚಾರಗಳ ಬಗ್ಗೆ ನನಗೆ ಸ್ಪಷ್ಟ ಮಾಹಿತಿಯಿಲ್ಲ. ಈಗ ಹೋಗಿ ನೋಡಬೇಕಿದೆ. ಏನೇ ಗೊಂದಲಗಳಿದ್ದರೂ ಹಿರಿಯ ನಾಯಕರು ಹಾಗೂ ಸಿಎಂ ಎಲ್ಲವನ್ನೂ ಸರಿಪಡಿಸಲಿದ್ದಾರೆ. ಸಿಎಂ ಅವರನ್ನು ಭೇಟಿಯಾಗಿ ಮುಂದಿನ ಹೆಜ್ಜೆ ಇಡುತ್ತೇನೆ ಎಂದು ತಿಳಿಸಿದರು.

## ಕಾವೇರಿ ವಿವಾದ: ನೀರು ಬಿಟ್ಟರೂ ಕರ್ನಾಟಕದ ವಿರುದ್ಧ

# ಸುಪ್ರೀಂ ಮೆಟ್ಟಿಲೇರಿದ ತಮಿಳುನಾಡು

ಮಳೆಯಾಗುತ್ತಿದ್ದು, ಒಳಹರಿವು ಗಮನಾರ್ಹವಾಗಿ ಹೆಚ್ಚಾಗಿದೆ ಎಂದು ತಮಿಳುನಾಡು ಹೇಳಿದ್ದು, ಬಿಳಿಗುಂಡ್ಲುವಿನಲ್ಲಿ 26.954 ಟಿಎಂಸಿ ನೀರನ್ನು ಪಡೆಯುವ ಅರ್ಹತೆ ಹೊಂದಿದೆ ಎಂದು ಹೇಳಿಕೊಂಡಿದೆ.

ಇದು ಪ್ರಸ್ತುತ ಅವಧಿಗೆ ಸಿಡಬ್ಲ್ಯೂಎಂಎ ನಿರ್ದೇಶಿಸಿದ 4.536 ಟಿಎಂಸಿಗಿಂತ ಗಣನೀಯವಾಗಿ ಹೆಚ್ಚಾಗಿದೆ.

ತಮಿಳುನಾಡಿನ ವಾದದ ಪ್ರಕಾರ, ರಾಜ್ಯಕ್ಕೆ ಅನುಪಾತದ ಆಧಾರದ ಮೇಲೆ 26.954 ಟಿಎಂಸಿ ನೀರು ದೊರಕಬೇಕಿದೆ.

ತನ್ನ ಪಾಲಿನ ನೀರನ್ನು ಯಾವುದೇ ವಿಳಂಬವಿಲ್ಲದೆ ಬಿಡುಗಡೆ ಮಾಡುವಂತೆ ಕರ್ನಾಟಕಕ್ಕೆ ನಿರ್ದೇಶನ ನೀಡಬೇಕು ಎಂದು ಅರ್ಜಿಯಲ್ಲಿ ಕೋರಲಾಗಿದೆ. ಕಾವೇರಿ ಜಲಾನಯನ ಪ್ರದೇಶದಲ್ಲಿ ವಾರದಿಂದ ಸುರಿಯುತ್ತಿರುವ ನಿರಂತರ ಮಳೆಯಿಂದಾಗಿ ಪ್ರಮುಖ ಜಲಾಶಯಗಳಿಗೆ ಭಾರಿ ಪ್ರಮಾಣದ ನೀರು ಹರಿದು ಬರುತ್ತಿದೆ. ಮೈಸೂರು ಜಿಲ್ಲೆಯ ಹೆಮ್ಮೆಯ ಕಬಿನಿ ಜಲಾಶಯ ಈಗಾಗಲೇ ಭರ್ತಿಯಾಗಿದ್ದು, ತಮಿಳುನಾಡಿನತ್ತ ಕಾವೇರಿ ನೀರು ಈ ಜಲಾಶಯದಿಂದ ಹರಿಯಲಾರಂಭಿಸಿದೆ. ಒಟ್ಟು 19.52 ಟಿಎಂಸಿ ಸಂಗ್ರಹ ಸಾಮರ್ಥ್ಯದ ಕಬಿನಿ ಜಲಾಶಯದಲ್ಲಿ ಈಗಾಗಲೇ 18 ಟಿಎಂಸಿ ನೀರು ಸಂಗ್ರಹಗೊಂಡಿದೆ.

ಜಲಾಶಯ ಸಂಪೂರ್ಣವಾಗಿ ಭರ್ತಿಯಾಗಿರುವ ಹಿನ್ನೆಲೆಯಲ್ಲಿ, ಸುರಕ್ಷತೆಯ ದೃಷ್ಟಿಯಿಂದ ಅಧಿಕಾರಿಗಳು ಜಲಾಶಯದ 4 ಕ್ರಸ್ಟ್ ಗೇಟ್‌ಗಳ ಮೂಲಕ ಸುಮಾರು 10 ಸಾವಿರ ಕ್ಯೂಸೆಕ್ಸ್ ನೀರನ್ನು ನದಿಗೆ ಹರಿಸುತ್ತಿದ್ದಾರೆ. ಈ ನೀರು ಕಪಿಲಾ ನದಿಯ ಮೂಲಕ ತಮಿಳುನಾಡಿನತ್ತ ಹರಿದು ಹೋಗಲಿದೆ.

# ಆ.10ರೊಳಗೆ ತುಂಗಭದ್ರಾ ಕಾಲುವೆಗಳಿಗೆ ನೀರು ಹರಿಸಿ

## ದರೂರ್ ಪುರುಷೋತಮ್ ಗೌಡ ಆಗ್ರಹ

–1ನೇ ಪುಟದಿಂದ..

ನೀರಿನ ಕೊರತೆ ಉಂಟಾದರೆ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕುವ ಪರಿಸ್ಥಿತಿ ನಿರ್ಮಾಣವಾಗುತ್ತದೆ ಎಂದು ಅವರು ಎಚ್ಚರಿಕೆ ನೀಡಿದರು. ತುಂಗಭದ್ರಾ ಜಲಾನಯನ ಪ್ರದೇಶದಲ್ಲಿ ಕಳೆದ ಕೆಲವು ದಿನಗಳಿಂದ ಉತ್ತಮ ಮಳೆಯಾಗುತ್ತಿರುವ ಪರಿಣಾಮ ಜಲಾಶಯಕ್ಕೆ ಒಳಹರಿವು ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ಹೀಗಾಗಿ ಜಲಾಶಯದಲ್ಲಿ ನೀರಿನ ಲಭ್ಯತೆ ಉತ್ತಮವಾಗಿರುವ ಈ ಸಂದರ್ಭದಲ್ಲಿ ಯಾವುದೇ ವಿಳಂಬ ಮಾಡದೆ ನೀರನ್ನು ಕಾಲುವೆಗಳಿಗೆ ಹರಿಸುವುದು ಅಗತ್ಯವಾಗಿದೆ ಎಂದು ಅವರು ತಿಳಿಸಿದರು. ಪ್ರತಿ ವರ್ಷ ನೀರು ಬಿಡುಗಡೆ ಮಾಡುವಲ್ಲಿ ವಿಳಂಬವಾಗುವುದರಿಂದ ರೈತರು ಸಾಕಷ್ಟು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಈ ಬಾರಿ ಅಂತಹ ಪರಿಸ್ಥಿತಿ ಮರುಕಳಿಸದಂತೆ ಸರ್ಕಾರ ಮುನ್ನೆಚ್ಚರಿಕೆ ಕ್ರಮ ಕೈಗೊಂಡು ಆಗಸ್ಟ್ 10ರೊಳಗೆ ಎಲ್ಲಾ ಪ್ರಮುಖ ಹಾಗೂ ಉಪ ಕಾಲುವೆಗಳಿಗೆ ನೀರು ಹರಿಸಬೇಕು ಎಂದು ಅವರು ಆಗ್ರಹಿಸಿದರು. ನೀರಾವರಿ ನೀರು ಸಮಯಕ್ಕೆ ದೊರೆತರೆ ಭತ್ತ, ಮೆಕ್ಕೆಜೋಳ, ಹತ್ತಿ ಹಾಗೂ ಇತರ ಮುಂಗಾರು ಬೆಳೆಗಳ ಬೆಳವಣಿಗೆಗೆ ಅನುಕೂಲವಾಗುತ್ತದೆ. ಇದರಿಂದ ರೈತರ ಉತ್ಪಾದನೆ ಹೆಚ್ಚುವುದರ ಜೊತೆಗೆ ಆರ್ಥಿಕ ಸ್ಥಿತಿಯೂ ಸುಧಾರಿಸುತ್ತದೆ. ಆದ್ದರಿಂದ ಸರ್ಕಾರ ರೈತರ ಹಿತವನ್ನು ಮೊದಲ ಆದ್ಯತೆಯಾಗಿ ಪರಿಗಣಿಸಿ ತಕ್ಷಣ ನಿರ್ಧಾರ ಕೈಗೊಳ್ಳಬೇಕೆಂದು ಅವರು ಒತ್ತಾಯಿಸಿದರು.

# ಮಕ್ಕಳ ಹಕ್ಕು, ಸುರಕ್ಷತೆ ಕುರಿತು ಜಾಗೃತಿ ಕಾರ್ಯಕ್ರಮ




**ವಿಭೂತಿಹಳ್ಳಿಯಲ್ಲಿ ಮಕ್ಕಳ ಹಕ್ಕು, ಸುರಕ್ಷತೆ ಮತ್ತು ಸಂರಕ್ಷಣೆ ಕುರಿತು ವರ್ಲ್ಡ್ ವಿಷನ್ ಇಂಡಿಯಾ ಸಂಸ್ಥೆ ಹಮ್ಮಿಕೊಂಡಿದ್ದ ಜಾಗೃತಿ ಕಾರ್ಯಕ್ರಮದಲ್ಲಿ ಮಕ್ಕಳು ಸಾಂಸ್ಕೃತಿಕ ಕಾರ್ಯಕ್ರಮಗಳ ಮೂಲಕ ಅರಿವು ಮೂಡಿಸಿದರು.**

ಯಾದಗಿರಿ : ಮಕ್ಕಳ ಮೇಲಿನ ದೌರ್ಜನ್ಯ ತಡೆಗಟ್ಟುವ ಹಾಗೂ ಮಕ್ಕಳ ಹಕ್ಕುಗಳು, ಸುರಕ್ಷತೆ ಮತ್ತು ಸಂರಕ್ಷಣೆಯ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ವರ್ಲ್ಡ್ ವಿಷನ್ ಇಂಡಿಯಾ ಸಂಸ್ಥೆಯ ವತಿಯಿಂದ ಯಾದಗಿರಿ ಜಿಲ್ಲೆಯ ಶಹಾಪುರ ತಾಲೂಕಿನ ವಿಭೂತಿಹಳ್ಳಿ ಗ್ರಾಮದಲ್ಲಿ ಜಾಗೃತಿ ಅಭಿಯಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ವರ್ಲ್ಡ್ ವಿಷನ್ ಇಂಡಿಯಾ ಸಂಸ್ಥೆಯ ವ್ಯವಸ್ಥಾಪಕ ಅನಿಲ್ ತೇಜಪ್ಪ ಬಲ್ಲೂರ್ಕರ್, 'ಮಕ್ಕಳ ಸುರಕ್ಷತೆ ಮತ್ತು ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಮಕ್ಕಳ ಮೇಲೆ ಯಾವುದೇ ರೀತಿಯ ದೌರ್ಜನ್ಯ ನಡೆಯದಂತೆ ಕುಟುಂಬ, ಶಾಲೆ ಹಾಗೂ ಸಮಾಜದ ಎಲ್ಲರೂ ಜಾಗರೂಕರಾಗಿ ಕಾರ್ಯನಿರ್ವಹಿಸಬೇಕು' ಎಂದು ಹೇಳಿದರು.

'ಮಕ್ಕಳ ಮೇಲೆ ದೈಹಿಕ, ಮಾನಸಿಕ ಹಾಗೂ ಲೈಂಗಿಕ ದೌರ್ಜನ್ಯ ಸೇರಿದಂತೆ ಯಾವುದೇ ರೀತಿಯ ಶೋಷಣೆ ನಡೆಯದಂತೆ ತಡೆಯುವುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಿದೆ. ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣಗಳಲ್ಲಿ ಪೋಕ್ಸೊ ಕಾಯ್ದೆಯಡಿ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ತಿಳಿಸಿದರು.

ಮಕ್ಕಳಿಗೆ ಯಾವುದೇ ಅಪಾಯ ಎದುರಾದ–ರೆ ತಕ್ಷಣವೇ ಪೋಷಕರು, ಶಿಕ್ಷಕರು ಅಥವಾ ಸಂಬಂಧಿಸಿದ ಅಧಿಕಾರಿಗಳ ಗಮನಕ್ಕೆ ತರಬೇಕು' ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಮಕ್ಕಳು ಜಾಗೃತಿ ಗೀತೆ, ಕಿರು ನಾಟಕ ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳ ಮೂಲಕ ಮಕ್ಕಳ ಮೇಲಿನ ದೌರ್ಜನ್ಯ, ಬಾಲ್ಯವಿವಾಹ, ಮಕ್ಕಳ ಹಕ್ಕುಗಳು ಹಾಗೂ ಸುರಕ್ಷತೆ ಕುರಿತು ಅರಿವು ಮೂಡಿಸಿದರು. ಮಕ್ಕಳ ಪ್ರದರ್ಶನಕ್ಕೆ ಗ್ರಾಮಸ್ಥರಿಂದ ಮೆಚ್ಚುಗೆ ವ್ಯಕ್ತವಾಯಿತು.

ಉತ್ತಮ ಪ್ರದರ್ಶನ ನೀಡಿದ ಮಕ್ಕಳಿಗೆ ಬಹುಮಾನ ವಿತರಿಸಿ ಸತ್ಕರಿಸಲಾಯಿತು. ಇದೇ ಸಂದರ್ಭದಲ್ಲಿ ಜಾಸ್ವ ಕಾರ್ಯಕ್ರಮದ ಸಂಯೋಜಕರು ಚೆನ್ನೈನಿಂದ ಆಗಮಿಸಿ ಮಕ್ಕಳೊಂದಿಗೆ ಸಂವಾದ ನಡೆಸಿ, ಮಕ್ಕಳ ಸುರಕ್ಷತೆ ಕುರಿತು ಮಾಹಿತಿ ನೀಡಿ–ದರು.

ಕಾರ್ಯಕ್ರಮದಲ್ಲಿ ಮೋಹನ್ ಕುಮಾರ್ ಹೊಸಮನಿ, ಸೌಂದರ್ಯ, ಶರಣಪ್ಪ ಟೀಪ್ಪೆದರ್, ಅಯ್ಯಪ್ಪ ಆಟೋ, ನಿಕಾಯಲ್, ರಾಬರ್ಟ್ ದೊಡ್ಡಮನಿ, ಮಾರುತಿ ಚವಾಣ್, ವರ್ಲ್ಡ್ ವಿಷನ್ ಇಂಡಿಯಾ ಸಂಸ್ಥೆಯ ಸಿಬ್ಬಂದಿ, ಮಕ್ಕಳು, ಪೋಷಕರು ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು.

ಕಾರ್ಯಕ್ರಮವು ಮಕ್ಕಳ ಸುರಕ್ಷಿತ, ಆರೋಗ್ಯಕರ ಹಾಗೂ ಸಂತೋಷದಾಯಕ ಬಾಲ್ಯ ನಿರ್ಮಾಣಕ್ಕೆ ಸಮಾಜದ ಎಲ್ಲರೂ ಕೈಜೋಡಿಸಬೇಕೆಂಬ ಸಂದೇಶದೊಂದಿಗೆ ಯಶಸ್ವಿಯಾಗಿ ನಡೆಯಿತು.

# ಕೋಟೆ ಮಾರಮ್ಮನ ಆರತಿ ಉತ್ಸವಕ್ಕೆ ಸಿದ್ಧತೆ

## ಪ್ರಾಣಿಬಲಿ ನಿಷೇಧಕ್ಕೆ ಡಿವೈಎಸ್‌ಪಿ ಕಟ್ಟುನಿಟ್ಟಿನ ಸೂಚನೆ




ಶಿರಾ : ನಗರದ ಐತಿಹಾಸಿಕ ಕೋಟೆ ಮಾರಮ್ಮ ದೇವಿಯ ವಾರ್ಷಿಕ ಆರತಿ ಮಹೋತ್ಸವವು ಮಂಗಳವಾರ ನಡೆಯಲಿರುವ ಹಿನ್ನೆಲೆಯಲ್ಲಿ, ಕಾರ್ಯಕ್ರಮವನ್ನು ಶಾಂತಿಯುತ ಹಾಗೂ ಸುಗಮವಾಗಿ ನಡೆಸಲು ಸಿರಾ ನಗರ ಪೊಲೀಸ್ ಠಾಣೆಯಲ್ಲಿ ಸೋಮವಾರ ಪೂರ್ವಭಾವಿ ಸಭೆ ನಡೆಯಿತು. ಸಿರಾ ಡಿವೈಎಸ್‌ಪಿ ಶೇಖರ್ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಆರತಿ ಮಹೋತ್ಸವದ ವೇಳೆ ಕೈಗೊಳ್ಳಬೇಕಾದ ಭದ್ರತಾ ಕ್ರಮಗಳು, ಸಂಚಾರ ವ್ಯವಸ್ಥೆ ಹಾಗೂ ಕಾನೂನು ಸುವ್ಯವಸ್ಥೆ ಕುರಿತು ಸಮಗ್ರ ಚರ್ಚೆ ನಡೆಸಲಾಯಿತು.

ಇನ್ನು ಈ ಸಭೆಯನ್ನುದ್ದೇಶಿಸಿ ಮಾತನಾಡಿದ ಡಿವೈಎಸ್‌ಪಿ ಶೇಖರ್, ಮಹೋತ್ಸವದ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಅಗತ್ಯ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದ್ದು, ಕಾರ್ಯಕ್ರಮದ ಸ್ಥಳದಲ್ಲಿ ಹೆಚ್ಚಿನ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗುವುದು ಎಂದು ತಿಳಿಸಿದರು.

ಭಕ್ತರು ಯಾವುದೇ ತೊಂದರೆ ಇಲ್ಲದೆ ದರ್ಶನ ಪಡೆಯುವಂತೆ ಸಂಚಾರ ನಿಯಂತ್ರಣ–ಕ್ಕೂ ವಿಶೇಷ ವ್ಯವಸ್ಥೆ ಕಲ್ಪಿಸಲಾಗಿದೆ ಎಂದರು. ದೇವಸ್ಥಾನದ ಆವರಣದಲ್ಲಿ ಯಾವುದೇ ಕಾರಣಕ್ಕೂ ಪ್ರಾಣಿಬಲಿ ನಡೆಸಬಾರದು ಎಂದು ಅವರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸರ್ಕಾರದ ನಿಯಮಗಳನ್ನು ಎಲ್ಲರೂ ಪಾಲಿಸಬೇಕು ಹಾಗೂ ಸಾರ್ವಜನಿಕರು ಮತ್ತು ಭಕ್ತರು ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಪೊಲೀಸ್ ಇಲಾಖೆಗೆ ಸಂಪೂರ್ಣ ಸಹಕಾರ ನೀಡುವಂತೆ ಮನವಿ ಮಾಡಿದರು.

ಸಭೆಯಲ್ಲಿ ಸಿರಾ ನಗರ ಪೊಲೀಸ್ ಠಾಣಾ ಸಿಪಿಐ ಪ್ರವೀಣ್ ಕುಮಾರ್, ಸುನಿಲ್, ಕೋಟೆ ಲೋಕೇಶ್, ನಗರಸಭೆ ಸದಸ್ಯ ರಫಿವುಲ್ಲಾ, ದೇವಸ್ಥಾನದ ಕೈವಾಡಸ್ತರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದು, ಮಹೋತ್ಸವವನ್ನು ಶಾಂತಿಯುತವಾಗಿ ಯಶಸ್ವಿಗೊಳಿಸಲು ಸಹಕರಿಸುವ ಭರವಸೆ ನೀಡಿದರು.

# ಅಭಿವೃದ್ಧಿ ಕಾಣದ ಉದ್ಯಾನವನ : ತಹಸೀಲ್ದಾರ್ ಮೌನ

## ಸಾರ್ವಜನಿಕರ ತೀವ್ರ ಆಕ್ರೋಶ–ಸ್ವಚ್ಛತೆಗೆ ಆಗ್ರಹ

ಕುಣಿಗಲ್ : ಮಿನಿ ವಿದಾನ ಸೌದದ ಅವರಣದಲ್ಲಿರುವ ಪಾರ್ಕ್ ವರ್ಷ ಕಳೆದರು ಅಭಿವೃದ್ಧಿ ಕಾಣದೆ ಸಂಪೂರ್ಣ ಗಿಡ ಮರಗಳು ಒಣಗುತ್ತಿದ್ದರು ತಹಸೀಲ್ದಾರ್ ಅವರು ಕ್ಯಾರೇ ಎನ್ನುತ್ತಿಲ್ಲ ಸಮರ್ಪಕವಾಗಿ ನಿರ್ವಹಣೆ ಮಾಡದ ಪರಿಣಾಮ ಉದ್ಯಾನವನ ಆವರಣದಲ್ಲಿ ಗಿಡ ಗಂಟೆಗಳು ಬೆಳೆದುಕೊಂಡಿವೆ, ಇದಲ್ಲದೆ ಕೆಲವರು ಕಸ ಕಡ್ಡಿಯನ್ನು ಇಲ್ಲಿಯ ಹೆಸರು ಹೋಗುತ್ತಿರುವ ಪರಿಣಾಮ ಉದ್ಯಾನವನ ಜನತೆಯ ಪಾಲಿಗೆ ಇದ್ದು ಇಲ್ಲದಂತಾಗಿದೆ,ಎಂದು ಸಾರ್ವಜನಿಕರು ತೀವ್ರ ಆಕ್ರೋಶ ಹೊರ ಹಾಕಿದ್ದಾರೆ,,

ಉದ್ಯಾನವನಗಳನ್ನು ಸ್ವಚ್ಛತೆಯಿಂದ ಇಡಬೇಕಾದ ಜವಾಬ್ದಾರಿ ತಹಸಿಲ್ದಾರ್ ಅವರ ಮೇಲಿದೆ, ಇದಲ್ಲದೆ ಹೊಸಹೊಸ ನಮೂನೆಯ ಸಸಿಗಳನ್ನು ನೆಟ್ಟರೆ ಮಳೆಗಾಲದಲ್ಲಿ ಅವು ಆದರೆ ಇವು ಯಾವು ಕೂಡ ನಡೆಯದಿರುವುದು ದುರದೃಷ್ಟಕರ ಸಂಗತಿ,

ಗಿಡ –ಮರಗಳಿಗೆ ಸರಿಯಾಗಿ ನೀರುಣಿಸುತ್ತಿಲ್ಲ ಈ ಬಗ್ಗೆ ಸ್ಥಳೀಯ ಪುರಸಭೆ ಅಧಿಕಾರಿಗಳಿಗೆ ಹಲವು ಬಾರಿ ಲಿಖಿತ ದೂರು ನೀಡಿದರು ಇದುವರೆಗೂ ಯಾವುದೇ ಪ್ರಯೋಜನವಾಗಿಲ್ಲ, ಅಧಿಕಾರಿಗಳು ತಕ್ಷಣವೇ ಎಚ್ಚೆತ್ತುಕೊಂಡು ಪಾರ್ಕ್ ಅಭಿವೃದ್ಧಿ ಪಡಿಸದಿದ್ದರೆ ಉಗ್ರ ಪ್ರತಿಭಟನೆ ನಡೆಸಲಾಗುವುದು ಎಂದು ಸ್ಥಳೀಯ ನಿವಾಸಿಗಳು ಎಚ್ಚರಿಸಿದ್ದಾರೆ,

ತಾಲೂಕು ಕಛೇರಿ ಅವರಣದಲ್ಲಿ ಉಪನೊಂದಣಿಧಿಕಾರಿ ಕಛೇರಿ ಮತ್ತು ಸಮಾಜ ಕಲ್ಯಾಣ ಇಲಾಖೆ ಮೀನುಗಾರಿಕೆ ಇಲಾಖೆ, ಕಂದಾಯ ಇಲಾಖೆ, ತಾಲ್ಲೂಕು ಪಂಚಾಯತ್ ಇಲಾಖೆ,ಮತ್ತು ಶಾಸಕರ ಕಛೇರಿ,ಮತ್ತು ಅದಲ್ಲದೆ ತಾಲೂಕು ದಂಡಾಧಿಕಾರಿಗಳು ಸಹ ಪ್ರತಿನಿತ್ಯ ಇದೆ ರಸ್ತೆಯಲ್ಲಿ ಓಡಾಡುತ್ತಾರೆ,ಆದರೂ ಇತ್ತ ಕಡೆ ಗಮನ ಹರಿಸುವಲ್ಲಿ ಸಂಪೂರ್ಣ ವಿಫಲರಾಗಿದ್ದಾರೆ, ವಾಕಿಂಗ್ ಪಾತ್ ಗಳು ಒಡೆದು ಹೋಗಿದ್ದು ರಾತ್ರಿ



ವೇಳೆ ದೀಪಗಳಿಲ್ಲದೆ ಸಾರ್ವಜನಿಕರು ಓಡಾಡಲು ಭಯ ಪಡುವಂತಾಗಿದೆ,

ಇಲ್ಲಿನ ಸ್ಥಳಿಯ ಉದ್ಯಾನವನವು ( ಪಾರ್ಕ್ ) ದಿನದಿಂದ ದಿನಕ್ಕೆ ದುಸ್ಥಿತಿಗೆ ತಲುಪುತ್ತಿದ್ದು, ಸಂಬಂಧಪಟ್ಟ ಅಧಿಕಾರಿಗಳು ಮತ್ತು ಸಂಪೂರ್ಣ ಮೌನ ವಹಿಸಿದ್ದಾರೆ, ಸಾರ್ವಜನಿಕರು ಮತ್ತು ಹಿರಿಯ ನಾಗರಿಕರು ವಾಕ್ ಮಾಡಲು ನಿರ್ಮಿಸಲಾದ ಈ ಪಾರ್ಕ್ ಈಗ ಕಸದ ತೊಟ್ಟಿಯಾಗಿ ಮಾರ್ಪಟ್ಟಿದೆ,

ನಿರ್ವಹಣೆ ಕೊರತೆ* : ತಾಲೂಕು ಕಚೇರಿ ಪಾರ್ಕ್ ನ ಲ್ಲಿ ಮೂಲಭೂತ ಸೌಲಭ್ಯಗಳು ಮತ್ತು ಗಿಡಮರಗಳ ಸಂರಕ್ಷಣೆಯಾಗಿಲ್ಲ

ಅಧಿಕಾರಿಗಳ ಮೌನ* : ಸಾರ್ವಜನಿಕರ ದೂರುಗಳಿಗೆ ಸ್ಪಂದಿಸದೆ ನಿರ್ಲಕ್ಷ ತೋರಿ ಹಲವು ಬಾರಿ ಮನವಿ ಮಾಡಿದರು ಯಾವುದೇ ಕ್ರಮ ಕೈಗೊಳ್ಳದ ಅಧಿಕಾರಿಗಳು

ಅಧಿಕಾರಿಗಳ ಮೀನಮೇಶ ( ವಿಳಂಬ ಧೋರಣೆ ಧೋರಣೆ )*: ಭಾರತಗಳಿಗೆ ನಿಯಮತವಾಗಿ ನೀರು ಹರಿಸಲು ಹಾಗೂ ಕೊಳವೆಬಾವಿ ರಿಪೇರಿ ಮಾಡಲು ಅಧಿಕಾರಿಗಳು ತಕ್ಷಣ ಸ್ಪಂದಿಸದೆ ವಿಳಂಬ ನೀತಿ ಅನುಸರಿಸುವುದು

**ಅರ್ಧಂಬರ್ಧ ಕಾಮಗಾರಿ:**

ಅಭಿವೃದ್ಧಿಯ ಹೆಸರಿನಲ್ಲಿ ಕೆಲಸ ಆರಂಭಿಸಿ, ಹಣ ಬಿಡುಗಡೆಯಾಗದ ನೆಪೋಟಿ ಅಥವಾ ಗುತ್ತಿಗೆದಾರರ ನಿರ್ಲಕ್ಷದಿಂದ ಕೆಲಸವನ್ನು ಅರ್ಧಕ್ಕೆ ಕೈ ಬಿಡುವುದು ಅಧಿಕಾರಿಗಳಿಗೆ ತಿಂಗಳಾದರೆ ಸಾಕು ಸಂಬಳ ಮಾತ್ರ ಬೇಕು.

ಇತರೆ ಜನಸಾಮಾನ್ಯರ ಕೆಲಸ ಪರಿಸರದ ಬಗ್ಗೆ ಯಾವುದೇ ಕಾಳಜಿ ಇಲ್ಲ,ಅಧಿಕಾರಿಗಳಿಗೆ ಮತ್ತು ಜನಪ್ರತಿನಿದಿನಗಳಿಗೆ ಹಳೇ ಓಊ48 ಮುಖ್ಯ ರಸ್ತೆಯಲ್ಲಿರುವ ಈ ಪಾರ್ಕ್ ನ ದುಸ್ಥಿತಿ ಹೇಳತೀರದು.

ಈ ಪಾರ್ಕ್ ನ ಜೀರ್ಣೋದ್ದಾರ ಕ್ಕೆ ಈಗಾಗಲೇ ಲಕ್ಷಾಂತರ ರೂಪಾಯಿ ಖರ್ಚು ಮಾಡಿದರೂ ಆ ಪಾರ್ಕನ ನೋಡಿಕೊಳ್ಳುವವರೂ ಸಹ ಯಾರು ಗತಿ ಇಲ್ಲದಂತಾಗಿದೆ,ಈ ಪಾರ್ಕ್ ನ ಬಗ್ಗೆ ಸಾರ್ವಜನಿಕರು ಹಾಗೂ ರೈತ ಮುಖಂಡರು ಅಧಿಕಾರಿಗಳ ಗಮನಕ್ಕೂ ತಂದರೂ ಇಲ್ಲಿಯವರೆಗೂ ಯಾವುದೇ ಪ್ರಯೋಜನ ವಾಗಿಲ್ಲ,,ಇನ್ನಾದರೂ ಅಧಿಕಾರಿಗಳು ಎಚ್ಚೆತ್ತುಕೊಂಡು ಈ ಉದ್ಯಾನವನಕ್ಕೆ ಪರ್ಯಾಯ ವ್ಯವಸ್ಥೆ ಮಾಡುತ್ತಾರೋ ? ಇಲ್ಲವೊ ಎಂಬುದು ಕಾದು ನೋಡಬೇಕಾಗಿದೆ,,

# ಜೆಡಿಎಸ್–ಬಿಜೆಪಿ ಮುಖಂಡರು ಪಕ್ಷ ತೊರೆದು ಕಾಂಗ್ರೆಸ್ ಸೇರ್ಪಡೆ



ಕುಣಿಗಲ್ : ಕುಣಿಗಲ್ ತಾಲೂಕಿನ ಹಂಚಿಪುರ ಗ್ರಾಮದ ಕೆಲ ಮುಖಂಡರು ಬಿಜೆಪಿ ಜೆಡಿಎಸ್ ತೊರೆದು ಶಾಸಕ ಡಾ. ರಂಗನಾಥ್ ರವರ ಕಾರ್ಯವೈಖರಿ ಮೆಚ್ಚಿ ಸೇರ್ಪಡೆ ಗೊಂಡ ಮುಖಂಡರುಗಳಾದ ಶಿವರಾಮ್.ಗಂಗಣ್ಣ. ಮಹೇಶ್ ಮತ್ತು ಇನ್ನು ಮುಂತಾದ ಗ್ರಾಮಸ್ಥರು ಗಳು ಸೇರಿಕೊಂಡರು ಸೇರ್ಪಡೆ ಗೊಂಡ ಮುಖಂಡರು ಗಳು ಮಾತನಾಡಿ ಶಾಸಕರ ಅಭಿವೃದ್ಧಿ ಕಾರ್ಯಗಳು ಮತ್ತು ಮತ್ತು ಅವರು ಶಾಸಕರಾದ ಮೇಲೆ ಕುಣಿಗಲ್ ಅಭಿವೃದ್ಧಿ ಪತದತ್ತ ಸಾಗುತ್ತಿದೆ ಎಲ್ಲಿ ನೋಡಿದರೂ ಅಭಿವೃದ್ಧಿ ಕಾರ್ಯಕ್ರಮಗಳು ಮತ್ತು ಕಾರ್ಯಕರ್ತರ ಬಗ್ಗೆ ಅವರಿಗೆ ಇರುವ ಕಾಳಜಿ ಅವನ್ನೆಲ್ಲವನ್ನು ಕಂಡು ನಾವು ಕಾಂಗ್ರೆಸ್ ಪಕ್ಷ ಸೇರಿಕೊಂಡಿದ್ದೇವೆ ಎಂದರು ಈ ಸಂಧರ್ಭದಲ್ಲಿ ಊರಿನ ಗ್ರಾಮಸ್ಥರು ಕಾಂಗ್ರೆಸ್ ಮುಖಂಡರು ಸ್ನೇಹಿತರು ಇದ್ದರು

# ತಿಕೋಟಾ ಪೊಲೀಸ್ ನೇಮಕಾತಿ ಪರೀಕ್ಷೆ ಗೊಂದಲ ಖಂಡನೆ:

## ಸಮಗ್ರ ತನಿಖೆಗೆ ಉದ್ಯೋಗಾಕಾಂಕ್ಷಿಗಳ ಹೋರಾಟ ಸಮಿತಿ ಆಗ್ರಹ

ವಿಜಯಪುರ : ಜಿಲ್ಲೆಯ ತಿಕೋಟಾದ ಶಾರದಾಂಬ ಶಿಕ್ಷಣ ಸಂಸ್ಥೆಯ ಪರೀಕ್ಷಾ ಕೇಂದ್ರದಲ್ಲಿ ನಡೆದ ಪೊಲೀಸ್ ನೇಮಕಾತಿ ಪರೀಕ್ಷೆಯಲ್ಲಿ ಉಂಟಾದ ವಿಳಂಬ ಹಾಗೂ ಗೊಂದಲವನ್ನು ಉದ್ಯೋಗಾಕಾಂಕ್ಷಿಗಳ ಹೋರಾಟ ಸಮಿತಿ ತೀವ್ರವಾಗಿ ಖಂಡಿಸಿದೆ. ಪರೀಕ್ಷೆಯ ವೇಳೆ ಪ್ರಶ್ನೆಪತ್ರಿಕೆ ಹಾಗೂ ಓಎಂಆರ್ ಉತ್ತರ ಪತ್ರಿಕೆಗಳನ್ನು ನಿಗದಿತ ಸಮಯಕ್ಕಿಂತ ತಡವಾಗಿ ವಿತರಿಸಿರುವುದರಿಂದ ಅಭ್ಯರ್ಥಿಗಳಲ್ಲಿ ಆತಂಕ ಹಾಗೂ ಗೊಂದಲ ಉಂಟಾಗಿ, ಪರೀಕ್ಷೆಯ ಪಾರದರ್ಶಕತೆ ಬಗ್ಗೆ ಅನುಮಾನಗಳು ವ್ಯಕ್ತವಾಗಿವೆ ಎಂದು ಸಮಿತಿ ಆರೋಪಿಸಿದೆ.

# ಸಕಲೇಶಪುರ ಅರಣ್ಯದಲ್ಲಿ ಆಫ್ ರೋಡ್ ಮಾಡಿದ 7 ಥಾರ್ ಜೀಪ್ ವಶ




ಸಕಲೇಶಪುರ: ಕಬ್ಬಿನಾಲೆ ರಕ್ಷಿತ ಅರಣ್ಯ ಪ್ರದೇಶದಲ್ಲಿ ಅರಣ್ಯ ಕಾಯ್ದೆ ಉಲ್ಲಂಘಿಸಿ ಮಹೀಂದ್ರ ಜೀಪ್‌ಗಳಲ್ಲಿ 'ಆಫ್ ರೋಡ್' ಮಾಡುತ್ತಿದ್ದ ಬೆಂಗಳೂರಿನ ಪ್ರವಾಸಿಗರ 7 ಥಾರ್ ಜೀಪ್‌ಗಳನ್ನು ಇಲ್ಲಿನ ವಲಯ ಅರಣ್ಯ ಇಲಾಖೆ ಅಧಿಕಾರಿಗಳು ಭಾನುವಾರ ವಶಕ್ಕೆ ಪಡೆದು ಪ್ರಕರಣ ದಾಖಲಿಸಿದ್ದಾರೆ.

ಶ್ಚಿಮಘಟ್ಟದ ಸೂಕ್ಷ್ಮ ಅರಣ್ಯದೊಳಗೆ ಜೀಪುಗಳನ್ನು ನುಗ್ಗಿಸಿ ಮೋಜು ಮಸ್ತಿ ಮಾಡಿ, ಸಸ್ಯ ಸಂಕುಲ ಅರಣ್ಯ ಹಾನಿ ಹಾಗೂ ಪ್ರಾಣಿ ಸಂಕುಲವನ್ನು ವಿಚಲಿತಗೊಳಿಸುತ್ತಿದ್ದ ಈ ಪ್ರವಾಸಿಗರ ಅಪರಾಧವನ್ನು ಗಂಭೀರವಾಗಿ ಪರಿಣಮಿಸಲಾಗಿದೆ. ಕಬ್ಬಿನಾಲೆ ಅರಣ್ಯ ಪ್ರದೇಶದ ಸರ್ವೆ ನಂಬರ್ 20, 21, 28 ರೊಳಗೆ ಅಕ್ರಮ ಅರಣ್ಯ ಪ್ರವೇಶ ಮಾಡಿದ್ದ ಎಲ್ಲ ಜೀಪುಗಳನ್ನು ಜಪ್ತಿಮಾಡಲಾಗಿದೆ ಎಂದು ಇಲಾಖೆಯ ಅಧಿಕಾರಿಗಳು ತಿಳಿಸಿದ್ದಾರೆ.

# ಯಾದಗಿರಿಯಲ್ಲಿ ಭೂ–ಒಡೆತನ ಯೋಜನೆ ಜಾರಿಗೊಳಿಸಲು ಆಗ್ರಹ:

## ರೈತರ ಬೆಳೆಸಾಲ ಮನ್ನಾ ಸೇರಿ ವಿವಿಧ ಬೇಡಿಕೆಗಳ ಮನವಿ

ಯಾದಗಿರಿ: ಸಮತಾ ಸೈನಿಕ ದಳ ಜಿಲ್ಲಾ ಸಮಿತಿಯ ನೇತೃತ್ವದಲ್ಲಿ ನೂರಾರು ಮಹಿಳೆಯರು ಹಾಗೂ ಮುಖಂಡರು ಜಿಲ್ಲಾಧಿಕಾರಿಗಳ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿ, ಭೂ–ಒಡೆತನ ಯೋಜನೆಯನ್ನು ತ್ವರಿತವಾಗಿ ಜಾರಿಗೊಳಿಸುವಂತೆ ಹಾಗೂ ಯಾದಗಿರಿ ಜಿಲ್ಲೆಯನ್ನು ಬರಪೀಡಿತ ಜಿಲ್ಲೆ ಎಂದು ಘೋಷಿಸಿ ರೈತರ ಬೆಳೆಸಾಲ ಮನ್ನಾ ಮಾಡುವಂತೆ ಒತ್ತಾಯಿಸಿದರು.

ಸಮಿತಿಯ ಮುಖಂಡರು ಮಾತನಾಡಿ, ಜಿಲ್ಲೆಯ ಅನೇಕ ದಲಿತ ಕುಟುಂಬಗಳು ಹಲವು ವರ್ಷಗಳಿಂದ ಕೃಷಿ ಭೂಮಿ ಹಾಗೂ ವಸತಿ ನಿವೇಶನವಿಲ್ಲದೆ ಸಂಕಷ್ಟದಲ್ಲಿದ್ದು, 2019–20ರಲ್ಲಿ ಭೂ–ಒಡೆತನ ಯೋಜನೆಯಡಿ ಭೂಮಿ ಹಂಚಿಕೆ ಪ್ರಕ್ರಿಯೆ ಆರಂಭವಾದರೂ, ಐದು ವರ್ಷ ಕಳೆದರೂ ಯೋಜನೆ ಪೂರ್ಣಗೊಂಡಿಲ್ಲ ಎಂದು ಆರೋಪಿಸಿದರು. ಭೂ ಮಾಲೀಕರು ಭೂಮಿ ನೀಡಲು ಒಪ್ಪಿಗೆ ನೀಡಿದ್ದರೂ, ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಹೊಸ ಸಮಿತಿ ರಚಿಸದ ಕಾರಣ ಯೋಜನೆ ಸ್ಥಗಿತಗೊಂಡಿದೆ ಎಂದು ದೂರಿದರು.



ಭೂ ಮಾಲೀಕರಿಗೆ ಸರ್ಕಾರ ನಿಗದಿತ ದರದಲ್ಲಿ ಪರಿಹಾರ ನೀಡಿ.

ಅರ್ಹ ದಲಿತ ಕುಟುಂಬಗಳಿಗೆ ಭೂಮಿ ಹಂಚಿಕೆ ಮಾಡಬೇಕು ಎಂದು ಒತ್ತಾಯಿಸಿದ ಪ್ರತಿಭಟನಾಕಾರರು, ಹತ್ತಿಗೂಡೂರು, ಐಕೂರು, ಮಾಲಹಳ್ಳಿ, ನಾಯ್ಕಲ್, ಚಟ್ನಳ್ಳಿ, ಬಲಕಲ್, ಮರಮಕಲ್, ದೋರನಹಳ್ಳಿ, ಇಂಗಳಗಿ, ಬಸವಂತಪುರ, ಹೈಯ್ಯಾಳ (ಬಿ), ಇಟ್ಟಿಗಿ, ಶಿರವಾಳ, ಕೊಂಗಂಡಿ, ಯಕ್ಷಿತಿ, ಬೊಮ್ಮನಹಳ್ಳಿ, ಅನವರ್, ಕೊಳ್ಳೂರು, ತುಮಕೂರು, ಕಾಡೆಮೆಗೆರ ಸೇರಿದಂತೆ ವಿವಿಧ ಗ್ರಾಮಗಳ ಫಲಾನುಭವಿಗಳನ್ನು ಯೋಜನೆಗೆ ಒಳಪಡಿಸಬೇಕು ಎಂದು ಆಗ್ರಹಿಸಿದರು.

ಇದೇ ವೇಳೆ, ಯಾದಗಿರಿ ಜಿಲ್ಲೆಯನ್ನು ಬರಪೀಡಿತ ಜಿಲ್ಲೆ ಎಂದು ಘೋಷಿಸಿ ರೈತರ ರಾಷ್ಟ್ರೀಕೃತ ಬ್ಯಾಂಕ್‌ಗಳ ಬೆಳೆಸಾಲವನ್ನು ಮನ್ನಾ ಮಾಡಬೇಕು ಹಾಗೂ ಬರದಿಂದ ನಷ್ಟ ಅನುಭವಿಸಿರುವ ರೈತರಿಗೆ ಸೂಕ್ತ ಪರಿಹಾರ ನೀಡಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ. ಅಲ್ಲದೆ, ಜಿಲ್ಲೆಯ ಎಲ್ಲಾ ಅರ್ಹ ದಲಿತ ಕುಟುಂಬಗಳಿಗೆ ಮನೆಗಳ ಮಂಜೂರಾತಿ ನೀಡುವಂತೆ ಸರ್ಕಾರವನ್ನು ಕೋರಲಾಗಿದೆ.

ಬೇಡಿಕೆಗಳನ್ನು ಈಡೇರಿಸದಿದ್ದಲ್ಲಿ ಸಮತಾ ಸೈನಿಕ ದಳದ ನೇತೃತ್ವದಲ್ಲಿ ಉಪವಾಸ ಸತ್ಯಾಗ್ರಹ, ಪ್ರತಿಭಟನೆ ಹಾಗೂ ಜನಪ್ರತಿನಿಧಿಗಳ ನಿವಾಸಗಳ ಎದುರು ಹೋರಾಟವನ್ನು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಅಧ್ಯಕ್ಷ ಹತ್ತಿಗುಡೂರ ಶರಣರಡ್ಡಿ, ಜಿಲ್ಲಾ ಗೌರವಾಧ್ಯಕ್ಷ ಶರಣಪ್ಪ ಕಡಿಮನಿ ಅನಕಸೂಗೂರು, ತಾಲೂಕು ಅಧ್ಯಕ್ಷ ಶರಣಪ್ಪ ಚಲುವಾದಿ, ತಾಲೂಕು ಮುಖಂಡ ಭೀಮರಾಯ ದೋರನಹಳ್ಳಿ ಸೇರಿದಂತೆ ಸಮತಾ ಸೈನಿಕ ದಳದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಅನಂತ ಜನಶಕ್ತಿ



# ಕಾಟಂದೇವರ ಕೋಟೆ ಗ್ರಾಮದಲ್ಲಿ ಮನೆಗಳಿಗೆ ನುಗ್ಗಿ ದಲಿತರ ಮೇಲೆ ಹಲ್ಲೆ

ಚಳ್ಳಕೆರೆ: ತಾಲೂಕಿನ ತಳಕು ಹೋಬಳಿ ಕಾಟಂದೇವರ ಕೋಟೆ ಗ್ರಾಮದಲ್ಲಿ ಶುಕ್ರವಾರ ರಾತ್ರಿ ದಲಿತರ ಮೇಲೆ ಹಲ್ಲೆ ನಡೆದಿದ್ದು, ಈ ಕುರಿತು ಪರಶುರಾಮಪುರ ಪೊಲೀಸ್ ಠಾಣೆಯಲ್ಲಿ ದೌರ್ಜನ್ಯ ಕಾಯ್ದೆಯಡಿ 15 ಜನರ ವಿರುದ್ಧ ಪ್ರಕರಣ ದಾಖಲಾಗಿದೆ. ಅಡಿಟಜ

13 ಮಂದಿ ಎಸ್ಟಿ ಸಮುದಾಯದವರು, ಗೊಲ್ಲ ಸಮುದಾಯದ ಇಬ್ಬರ ವಿರುದ್ಧ ದೂರು ನೀಡಲಾಗಿದೆ ಎಂದು ದಸಂಸ ತಾಲೂಕು ಸಂಚಾಲಕ ಟಿ. ವಿಜಯಕುಮಾರ್ ತಿಳಿಸಿದ್ದಾರೆ.

ಆರೋಪಿತರು ಗ್ರಾಮದಲ್ಲಿ ಡಂಗೂರ ಸಾರಿಸಿ ಎಲ್ಲರ ಸಮ್ಮುಖದಲ್ಲಿ ಒಂದು ಸಭೆ ನಡೆಸಿ, ಹಿಂದಿನ ಕಾಲದಿಂದಲೂ ಹಟ್ಟಿ ಜನರು ಊರಿನಲ್ಲಿ ಯಾರಾದರೂ ಸತ್ತರೆ ಗುಂಡಿ ತೋಡುವುದು, ಹಬ್ಬ, ಜಾತ್ರೆಗಳಲ್ಲಿ ಊರಿನ ಸ್ವಚ್ಛತೆ ಕೆಲಸ ಮಾಡುತ್ತಿದ್ದರು. ಈಗ ಕರೆದರೂ ಯಾರು ಬರುತ್ತಿಲ್ಲ. ಗ್ರಾಮದ ಸಂಪ್ರದಾಯಗಳು ಮುಂದುವರಿಯಬೇಕು ಎಂದು ತಾಕೀತು ಮಾಡಿದ್ದರು ಎನ್ನಲಾಗಿದೆ.



ಅದಕ್ಕೆ ಪ್ರತ್ಯುತ್ತರ ನೀಡಿದ ದಲಿತರು, ಊರಿನ ಸಾರ್ವಜನಿಕ ಸ್ಥಳಗಳಲ್ಲಿ ನಮಗೆ ಮುಕ್ತ ಅವಕಾಶವಿಲ್ಲ. ಕೆರೆಯಲ್ಲಿ ಜಾಲಿ ಗಿಡಗಳ ಹರಾಜು ಹಣವನ್ನು ಚೀಟಿ ಮಾಡುತ್ತೀರಿ. ಇದರಲ್ಲಿ ನಮ್ಮ ಸಮುದಾಯಕ್ಕೆ ಚೀಟಿ ಹಣ ಬಡ್ಡಿಗೂ ಕೊಡುತ್ತಿಲ್ಲ. ಗ್ರಾಮದಲ್ಲಿರುವ ಕಲ್ಯಾಣ ಮಂಟಪದಲ್ಲಿ ನಮ್ಮ ಸಮುದಾಯದ ಮದುವೆಗಳಿಗೆ ಅವಕಾಶ ನೀಡುತ್ತಿಲ್ಲ. ಈಗಿನ ಕಾಲದಲ್ಲೂ ನಮಗೆ ತಾರತಮ್ಯ ಮಾಡುತ್ತಿದ್ದೀರಿ ಎಂದಿದ್ದಾರೆ. ಇದರಿಂದ ಕುಪಿತಗೊಂಡ ಆರೋಪಿತರು ಗುಂಪು ಕಟ್ಟಿಕೊಂಡು ಏಕಾಏಕಿ ದಲಿತರ ಮನೆಗಳಿಗೆ ನುಗ್ಗಿ, ಹತ್ತಾರು ಜನರ ಮೇಲೆ ಹಲ್ಲೆ ನಡೆಸಿದ್ದಾರೆ. ಘಟನೆಯಲ್ಲಿ ಗಾಯಗೊಂಡ ಐವರು ಮಹಿಳೆಯರು, ಆರು ಮಂದಿ ಪುರುಷರು ಚಳ್ಳಕೆರೆ ನಗರದ ಸಾರ್ವಜನಿಕ ಆಸ್ಪತ್ರೆಯಲ್ಲಿ ದಾಖಲಾಗಿದ್ದಾರೆ.ದಆಕ್ರೋಶ: ಚಳ್ಳಕೆರೆ ಮತ್ತು ಮೊಳಕಾಲ್ಮೂರು ತಾಲೂಕಿನಲ್ಲಿ ದಲಿತರ ಮೇಲಿನ ಹಲ್ಲೆ, ದೌರ್ಜನ್ಯ ಘಟನೆಗಳು ನಿರಂತರವಾಗಿ ನಡೆಯುತ್ತಿವೆ. ಈ ಭಾಗದಲ್ಲಿ ಏಳು ಬಾರಿ ಗೆದ್ದಿರುವ ಎನ್.ವೈ. ಗೋಪಾಲಕೃಷ್ಣ, 3 ಬಾರಿ ಗೆದ್ದಿರುವ ರಘುಮೂರ್ತಿ ಅವರಿಗೆ ದಲಿತರ ಮತಗಳೇ ನಿರ್ಣಾಯಕ. ರಾಜಕಾರಣ ಮಾಡಲು ನಮ್ಮ ಮತ ಬಳಸಿಕೊಳ್ಳುವ ಶಾಸಕರು, ಹಲ್ಲೆ, ದೌರ್ಜನ್ಯ, ಸಾಮಾಜಿಕ ಬಹಿಷ್ಕಾರ ಘಟನೆಗಳು ನಡೆದಾಗ ಬೆಂಬಲಕ್ಕೆ ಬರುವುದಿಲ್ಲ ಎಂದು ದಲಿತ ಸಂಘಟನೆಗಳ ಮುಖಂಡರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

# ಅಭಿಮಾನಿಗಳ ನಡುವೆ ಮಾಜಿ ಶಾಸಕ ತಿಪ್ಪಾರೆಡ್ಡಿ ಜನ್ಮ ದಿನಾಚರಣೆ



ಚಿತ್ರದುರ್ಗ: ಚಿತ್ರದುರ್ಗ ಮಾಜಿ ಶಾಸಕ ಜಿ.ಎಚ್.ತಿಪ್ಪಾರೆಡ್ಡಿ ಅವರ ಜನ್ಮ ದಿನವನ್ನು ಶನಿವಾರ ಅವರ ನಿವಾಸದಲ್ಲಿ ಸಂಭ್ರ ಮದಿಂದ ಆಚರಿಸಲಾಯಿತು.

ನಗರ, ಚಿತ್ರದುರ್ಗ ತಾಲೂಕು ಹಾಗೂ ಜಿಲ್ಲೆಯ ವಿವಿಧೆಡೆಗಳಿಂದ ಆಗಮಿಸಿದ್ದ ಅಭಿಮಾನಿಗಳು ಶಾಲು, ಹೂವಿನ ಹಾರ, ಹೂವಿನ ಬೊಕ್ಕೆ, ಕೇಕ್‌ನೊಂದಿಗೆ ಆಗಮಿಸಿ ತಿಪ್ಪಾರೆಡ್ಡಿ ಅವರಿಗೆ ಜನ್ಮ ದಿನದ ಶುಭಾಶಯಗಳನ್ನು ಕೋರಿದರು. ಕೇಕ್ ಕತ್ತರಿಸಿ, ಹಾರ ತು ರಾಯಿ ಹಾಕಿ, ಶಾಲು ಹೊದಿಸಿ ಹರ್ಷ ವ್ಯಕ್ತಪಡಿಸಿದರು.ಬೆಳಗ್ಗೆಯಿಂದಲೇ ಅವರ ನಿವಾಸಕ್ಕೆ ಅಭಿಮಾನಿಗಳ, ಪಕ್ಷದ ಕಾರ್ಯಕರ್ತರ ದಂಡು ಹರಿದು ಬರ ತೊಡಗಿ-ತು. ಸಂಸದ ಗೋವಿಂದ ಎಂ. ಕಾರಜೋಳ ಅವರು ತಿಪ್ಪಾರೆಡ್ಡಿ ಅವರ ಮನೆಗೆ ಭೇಟಿ ಮಾಜಿ ಶುಭಾಶಯ ಕೋರಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಕೆ.ಟಿ. ಕುಮಾರಸ್ವಾಮಿ, ಉಪಾಧ್ಯಕ್ಷ ಡಾ. ಸಿದ್ದಾರ್ಥ ಗುಂಡಾರ್ಪಿ, ವೆಂಕಟೇಶ್‌ಯಾದವ್, ಬಾಳೆಕಾಯಿ ರಾಮ ದಾಸ್, ರಘುಮೂರ್ತಿ, ನಾಗರಾಜ್, ರೇಖಾ, ಮಲ್ಲಿಕಾರ್ಜುನ, ನಾಗರಾಜ್‌ಬೇದ್ರೆ, ನವೀನ್‌ಚಾಲುಕ್ಯ, ಲೀಲಾವತಿ ಬಸವೇಶ್, ಪರಶುರಾಮ್, ಭರತ್, ಡಾ. ವಸಂತ್‌ಆಚಾರ್, ಸಿದ್ದೇಶ್‌ಯಾದವ್ ಸೇರಿ ಬಿಜೆಪಿ ನಾನಾ ಪ್ರಮುಖರು, ನಾನಾ ಜನ ಪ್ರತಿನಿಧಿಗಳು ಪಕ್ಷದ ಕಾರ್ಯಕರ್ತರು, ಅಭಿಮಾನಿಗಳು ಹಾಜರಿದ್ದರು.

# ಅರುಣೋದಯ ಶಾಲೆಯಲ್ಲಿ ಮಕ್ಕಳಿಂದ ಪಾಲಕರ ಪಾದಪೂಜೆ



ಬೀದರ್: ಗುರು ಪೂರ್ಣಿಮೆ ಅಂಗವಾಗಿ ನಗರದ ಋಷಿಕೇಶ ಶಿಕ್ಷಣ ಸಂಸ್ಥೆ ಸಂಚಾಲಿತ ಅರುಣೋದಯ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಬುಧವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಪಾಲಕರ ಪಾದಪೂಜೆ ಮಾಡಿದರು.

ಪಾದ ತೊಳೆದು ಕುಂಕುಮ ಹಚ್ಚಿ, ಹೂಮಾಲೆ ಹಾಕಿ, ಆರತಿ ಬೆಳಗಿ, ಸಿಹಿ ತಿನಿಸಿದರು. ಗುರುಗಳಿಗೆ ವಂದನೆ ಸಲ್ಲಿಸಿದರು. ಶಾಲಾ ಆಡಳಿತ ಮಂಡಳಿಯವರು ಶಿಕ್ಷಕರಿಗೆ ನೆನಪಿನ ಕಾಣಿಕೆ ಕೊಟ್ಟು ಗೌರವಿಸಿದರು.

ಮಕ್ಕಳಿಂದ ಅವಿಭಕ್ತ ಹಾಗೂ ವಿಭಕ್ತ ಕುಟುಂಬ ಕುರಿತು ಹರಟೆ ಕಟ್ಟೆಯಲ್ಲಿ ಅರ್ಥಪೂರ್ಣ ಚರ್ಚೆ ನಡೆಯಿತು. ವಿದ್ಯಾರ್ಥಿಗಳು ತಮ್ಮ ವಾದಗಳನ್ನು ಮಂಡಿಸಿದರು.

ಉದ್ಘಾಟನೆ ನೆರವೇರಿಸಿದ ಕರ್ನಾಟಕ ಕೌನ್ಸಿಲ್ ಆಫ್ ಪ್ರೊಫೆಷನಲ್ ಸಿವಿಲ್ ಎಂಜಿನಿಯರ್ಸ್ ಸದಸ್ಯ ಹಾವಶೆಟ್ಟಿ ಪಾಟೀಲ, ಅಕ್ಷರ, ಬದುಕು ಹಾಗೂ ಮುಕ್ತಿಯ ಮಾರ್ಗ ತೋರುವವನೇ ಗುರು ಎಂದು ಹೇಳಿದರು.

ಭಾರತೀಯ ಶಿಕ್ಷಣ ಮಂಡಲ ಕರ್ನಾಟಕ ಉತ್ತರ ಪ್ರಾಂತ ಸಹ ಕಾರ್ಯದರ್ಶಿ ಪಲ್ಲವಿ ಪಾಟೀಲ ಮಾತನಾಡಿ, ಮಕ್ಕಳು ಜ್ಞಾನ ಕೊಟ್ಟ ಗುರುವನ್ನು ಜೀವನದಲ್ಲಿ ಎಂದೂ ಮರೆಯಬಾರದು ಎಂದರು.

ಋಷಿಕೇಶ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ಸಂತೋಷಕುಮಾರ ಮಂಗಳೂರೆ ಅಧ್ಯಕ್ಷತೆ ವಹಿಸಿದ್ದರು. ಅಲ್ಕಾವತಿ ಹೊಸದೊಡ್ಡೆ ನಿರೂಪಿಸಿದರು. ನೀಲಮ್ಮ ಗಜಲೆ ಸ್ವಾಗತಿಸಿದರು. ಪ್ರಿಯಾಂಕ ಮಲ್ಕಾಪುರೆ ವಂದಿಸಿದರು.

## ಘಟಪ್ರಭಾದಲ್ಲಿ ಉಚಿತ ಆರೋಗ್ಯ ತಪಾಸಣೆ ಮತ್ತು ರಕ್ತದಾನ ಶಿಬಿರ

ಘಟಪ್ರಭಾ (ಗೋಕಾಕ): ಇಲ್ಲಿನ ಮೂರು ಸಾವಿರಮಠದ ಶಾಖಾ ಮಠವಾದ ಗುಬ್ಬಲಗುಡ್ಡ ಕೆಂಪಯ್ಯಸ್ವಾಮಿ ಮಠದ ಮಲ್ಲಿಕಾರ್ಜುನ ಸ್ವಾಮೀಜಿ ಅವರ 42ನೇ ಜನ್ಮದಿನದ ಅಂಗವಾಗಿ ಉಚಿತ ಆರೋಗ್ಯ ತಪಾಸಣೆ ಮತ್ತು ರಕ್ತದಾನ ಶಿಬಿರವನ್ನು ಹಮ್ಮಿಕೊಳ್ಳುತ್ತಿದೆ. ಕೆಎಲ್‌ಇ ಆಸ್ಪತ್ರೆಯಿಂದ 50ಕ್ಕೂ ಹೆಚ್ಚು ತಜ್ಞ ವೈದ್ಯರು ಶಿಬಿರದಲ್ಲಿ ಪಾಲ್ಗೊಳ್ಳುತ್ತಿದ್ದು, ಶಿಬಿರದಲ್ಲಿ ಶಸ್ತ್ರ ಚಿಕಿತ್ಸೆ, ಚಿಕ್ಕಮಕ್ಕಳ ಆರೋಗ್ಯ ತಪಾಸಣೆ, ಕಣ್ಣು, ಕಿವಿ, ಮೂಗು, ಗಂಟಲು, ಚರ್ಮ ರೋಗ, ಹೃದಯ ರೋಗ, ನರ ರೋಗ, ಗರ್ಭಕಂಠದ ಕ್ಯಾನ್ಸರ್ ಪತ್ತೆ ಹಚ್ಚಲು ತಪಾಸಣೆಯನ್ನು ಉಚಿತವಾಗಿ ನಡೆಸಲಾಗುತ್ತದೆ.

# ಹಂಚಿನಾಳದಲ್ಲಿ ಮಳೆಗಾಲದಲ್ಲೂ ಹನಿ ನೀರಿಗೂ ಹಾಹಾಕಾರ



ಸವದತ್ತಿ: ತಾಲ್ಲೂಕಿನ ಹಂಚಿನಾಳದಲ್ಲಿ ಮಳೆಗಾಲದಲ್ಲೇ ಹನಿ ನೀರಿಗೂ ಹಾಹಾಕಾರ ಪಡುವ ಸ್ಥಿತಿ ನಿರ್ಮಾಣವಾಗಿದೆ.

ಗ್ರಾಮ ಪ್ರವೇಶಿಸುತ್ತಿದ್ದಂತೆ ಖಾಲಿ ಕೊಡಗಳದ್ದೇ ದರ್ಶನವಾಗುತ್ತಿದೆ. ಬರ ಪರಿಸ್ಥಿತಿಯಿಂದ ದುಡಿಯಲು ಕೆಲಸವಿಲ್ಲದೆ ಪರದಾಡುತ್ತಿರುವ ಜನ ಕುಡಿಯುವ ನೀರು ಸಂಗ್ರಹಿಸಲು ಇಡೀದಿನ ಕಾಯುವ ಸ್ಥಿತಿ ನಿರ್ಮಾಣವಾಗಿದೆ.

ಬೇಸಿಗೆಯಲ್ಲೂ ಇಲ್ಲಿ ಜಲಬವಣೆ ತಲೆದೋರಿತ್ತು. ಆಗ ಗ್ರಾಮಸ್ಥರು ಪ್ರತಿಭಟನೆ ನಡೆಸಿ ಸರ್ಕಾರದ ಗಮನಸೆಳೆದಿದ್ದರು. ಇದಕ್ಕೆ ಸ್ಪಂದಿಸಿದ ಶಾಸಕ ವಿಶ್ವಾಸ ವೈದ್ಯ ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ಅನುದಾನ ನೀಡಿ, ಸಮಸ್ಯೆ ಬಗೆಹರಿಸುವಂತೆ ಸೂಚಿಸಿದ್ದರು. ಆದರೂ, ಅಧಿಕಾರಿಗಳು ಗಮನಹರಿಸಲಿಲ್ಲ. ಈಗ ಮಳೆಗಾಲದಲ್ಲೂ ಅಧಿಕಾರಿಗಳು ಇತ್ತ ಕಣ್ಣೆತ್ತಿ ನೋಡದ್ದರಿಂದ ಜಲಸಂಕಷ್ಟ ತಲೆದೋರಿದೆ.

ಕೊಡ ನೀರಿಗಾಗಿ ಮಹಿಳೆಯರು, ವೃದ್ಧರು, ಮಕ್ಕಳು ತಳ್ಳುವ ಗಾಡಿ ನೂಕುತ್ತ ಅಲೆದಾಡುತ್ತಿರುವ ದೃಶ್ಯ ಕಣ್ಣಿಗೆ ಬೀಳುತ್ತಿವೆ. ಮನೆ ಮನೆಗೆ ಪೂರೈಕೆಯಾಗಬೇಕಿದ್ದ ಜಲಜೀವನ ಮಿಷನ್ ಯೋಜನೆ ನೀರು ಸ್ಥಗಿ-ತಗೊಂಡು ಹಲವಾರು ದಿನಗಳಾಗಿವೆ.

10 ದಿನಗಳಿಂದ ನಲ್ಲಿಗಳಲ್ಲಿ ನೀರಿಲ್ಲ!

‘ಹಂಚಿನಾಳ ಗ್ರಾಮಕ್ಕೆ ಕಳೆದ 10 ದಿನಗಳಿಂದ ನೀರಿನ ಪೂರೈಕೆಯಾಗಿಲ್ಲ. ಐದು ಕಡೆ ಸಾರ್ವಜನಿಕ ನಲ್ಲಿಗಳಿವೆ. ಎಲ್ಲಿಯೂ ನೀರು ಬರುತ್ತಿಲ್ಲ.

ಈ ಕುರಿತು ಅಧಿಕಾರಿಗಳಿಂದ ಸ್ಪಷ್ಟ ಉತ್ತರ ದೊರೆಯುತ್ತಿಲ್ಲ’ ಎಂದು ಗ್ರಾಮಸ್ಥರು ದೂರುತ್ತಾರೆ.

‘ನಮಗೆ ಹೆಚ್ಚುವರಿ ಸೌಲಭ್ಯ ಬೇಡ. ನಿಗದಿತ ಸಮಯಕ್ಕೆ ಕುಡಿಯುವ ನೀರು ನೀಡಿ’ ಎಂದು ಗ್ರಾಮಸ್ಥರಾದ ಬಸನಗೌಡ ಪಾಟೀಲ ಹಾಗೂ ಮಂಜುನಾಥ ಜಟ್ಟೆನ್ನವರ ಆಗ್ರಹಿಸಿದರು. ‘ಕೆರೆ ನೀರು ಕಲುಷಿತವಾಗಿದೆ. ಶುದ್ಧ ಕುಡಿಯುವ ನೀರಿನ ಘಟಕವೂ ಬಂದ್ ಆಗಿದೆ.

ಹಾಗಾಗಿ ಕುಡಿಯಲು ಯೋಗ್ಯ ನೀರು ಸಿಗುತ್ತಿಲ್ಲ. ಸರ್ಕಾರದ ಯೋಜನೆಗಳು ಕಾಗದದಲ್ಲಷ್ಟೇ ಇವೆ’ ಎಂದು ಗ್ರಾಮಸ್ಥ ಸಿದ್ದಪ್ಪ ರುದ್ರಪ್ಪ ಹುಲಗನ್ನವರ ಆಕ್ರೋಶ ವ್ಯಕ್ತಪಡಿಸಿದರು.

# ಭಾರತ್ ಕ್ಯಾನ್ಸರ್ ಆಸ್ಪತ್ರೆಯಲ್ಲಿ ‘ಎಐ ಚಾಲಿತ ಎಂಆರ್‌ಐ’ ವ್ಯವಸ್ಥೆ



ಮೈಸೂರು: ಇಲ್ಲಿನ ಹೆಬ್ಬಾಳದ ವರ್ತುಲ ರಸ್ತೆಯಲ್ಲಿರುವ ಭಾರತ್ ಆಸ್ಪತ್ರೆ ಮತ್ತು ಕ್ಯಾನ್ಸರ್ ಸಂಸ್ಥೆ ಎಐ (ಕೃತಕ ಬುದ್ಧಿಮತ್ತೆ) ಚಾಲಿತ ಎಂಅರ್‌ಐ (ಮ್ಯಾಗ್ನೆಟಿಕ್ ರೆಸೊನೆನ್ಸ್ ಇಮೇಜಿಂಗ್) ವ್ಯವಸ್ಥೆಯನ್ನು ಆರಂಭಿಸಲಾಗಿದೆ.

ಈ ಸೇವೆಯನ್ನು ಬಿಎಚ್‌ಐಒ ಅಧ್ಯಕ್ಷ ಡಾ.ಬಿ.ಎಸ್. ಅಜಯ್‌ಕುಮಾರ್ ಸೋಮವಾರ ಉದ್ಘಾಟಿಸಿದರು. ನಂತರ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ‘ಮೈಸೂರಿನ ಮೊದಲ ಎಐ ಚಾಲಿತ ಎಂಆರ್‌ಐ ವ್ಯವಸ್ಥೆಯನ್ನು ನಮ್ಮ ಆಸ್ಪತ್ರೆ ಹೊಂದಿದಂತಾಗಿದೆ.

ಇದು ರೋಗ ನಿರ್ಣಯ, ಆರೋಗ್ಯ ರಕ್ಷಣೆಯಲ್ಲಿ ಪ್ರಮುಖ ಮುನ್ನಡೆ ಸಾಧಿಸಿದಂತಾಗಿದೆ. ಸುಧಾರಿತ ವೈದ್ಯಕೀಯ ತಂತ್ರಜ್ಞಾನ ಇದಾಗಿದ್ದು, ದೊಡ್ಡ ಕನಸೊಂದು ನನಸಾಗಿದೆ’ ಎಂದು ತಿಳಿಸಿದರು.

‘ನಿಖರ ಮಾಹಿತಿ ಪಡೆಯಲು ಇದು ಸಹಕಾರಿ ಆಗಲಿದೆ. ಟ್ಯೂಮರ್ ಇದೆಯೋ, ಇಲ್ಲವೋ ಎಂಬುದನ್ನು ಪತ್ತೆ ಹಚ್ಚಬಹುದಾಗಿದೆ. ಡೇಟಾ (ದತ್ತಾಂಶ) ಸಂಗ್ರಹದಲ್ಲಿ ಬಹಳ ಮಹತ್ವದ್ದಾಗಿದೆ. ಇದರಿಂದ ಯಾವುದೇ ಅಡ್ಡಪರಿಣಾಮ ಉಂಟಾಗುವುದಿಲ್ಲ.

ಸ್ಕ್ಯಾನಿಂಗ್ ಸಮಯವನ್ನೂ ತಗ್ಗಿಸುತ್ತದೆ. ವಿವಿಧ ಕಾಯಿಲೆಗಳನ್ನು ಆರಂಭಿಕ ಹಂತದಲ್ಲೇ ಪತ್ತೆಹಚ್ಚಲು ವಿಕಿರಣತಜ್ಞರಿಗೆ ನೆರವಾಗುವ ಬುದ್ಧಿವಂತ ಇಮೇಜಿಂಗ್ ಸಾಮರ್ಥ್ಯಗಳನ್ನು ಹೊಂದಿದೆ. ಮರುಸ್ಕ್ಯಾನ್ ಅಗತ್ಯವನ್ನು ಕಡಿಮೆ ಮಾಡಲಿದೆ’ ಎಂದು ಮಾಹಿತಿ ನೀಡಿದರು.

## ಕಡಿಮೆ ಬಡ್ಡಿ ದರದಲ್ಲಿ ಸಾಲ ನೀಡಿ ಲಾಭ ಮಾಡಿಕೊಳ್ಳಲು ಸಹಕಾರ ಸಂಘಗಳಿಗೆ ಸಲಹೆ

ರಾಮದುರ್ಗ: ‘ಸಹಕಾರ ಸಂಘಗಳು ಸಂಗ್ರಹಗೊಂಡ ಹಣವನ್ನು ರಾಷ್ಟ್ರೀಕೃತ ಬ್ಯಾಂಕಗಳಲ್ಲಿ ಠೇವಣಿ ಮಾಡುವುದಕ್ಕಿಂತ ಸಹಕಾರ ಸಂಸ್ಥೆಗಳ ಷೇರುದಾರರಿಗೆ ಕಡಿಮೆ ಬಡ್ಡಿ ದರದಲ್ಲಿ ಸಾಲ ನೀಡಿ, ಹೆಚ್ಚಿನ ಲಾಭ ಮಾಡಿಕೊಳ್ಳಬೇಕು’ ಎಂದು ನಿವೃತ್ತ ಸಹಕಾರಿ ಅಭಿವೃದ್ಧಿ ಅಧಿಕಾರಿ ವಿ.ಜಿ. ಕುಲಕರ್ಣಿ ಹೇಳಿದರು.

ವಿಶ್ವೇಶ್ವರಯ್ಯ ಕಲ್ಯಾಣ ಮಂಟಪದಲ್ಲಿ ನಡೆದ ಸ್ಥಳೀಯ ಮಹಾಂತೇಶ ಅರ್ಬನ್ ಕೋ ಆಪ್ ಕ್ರೆಡಿಟ್ ಸೊಸೈಟಿಯ 33ನೇ ಸರ್ವ ಸಾಧರಣ ಸಭೆಯಲ್ಲಿ ಮಾತನಾಡಿದ ಅವರು, ‘ಉತ್ತಮ ಆಡಳಿತ ಮಂಡಳಿ, ಕಾರ್ಯಕ್ಷಮತೆಯ ಸಿಬ್ಬಂದಿಯ ಶ್ರಮದಿಂದ ಸಹಕಾರ ಸಂಘಗಳಿದ್ದರೆ ಠೇವಣಿ ಇಡುವವರ ಸಂಖ್ಯೆ ಹೆಚ್ಚಾಗುವುದು’ ಎಂದು ಹೇಳಿದರು.

‘ಸಹಕಾರ ಸಂಘಗಳು ಅಭಿವೃದ್ಧಿ ಹೊಂದಬೇಕಾದರೆ ಷೇರುದಾರರು ಸಂಘದಲ್ಲಿ ವ್ಯವಹಾರ ಮಾಡಬೇಕು. ಪಡೆದ ಸಾಲವನ್ನು ಸಮರ್ಪಕವಾಗಿ ಬಳಕೆ ಮಾಡಿಕೊಂಡು ಸಾಲ ಮರುಪಾವತಿಸಿದರೆ ಮಾತ್ರ ಸಂಘದೊಂದಿಗೆ ನಿಮ್ಮ ಆರ್ಥಿಕತೆ ಸುಧಾರಣೆ ಹೊಂದಲು ಸಾಧ್ಯ’ ಎಂದು ಹೇಳಿದರು.

ಸೊಸೈಟಿಯ ಅಧ್ಯಕ್ಷ ಶಶಿಧರ ಮಾಳವಾಡ ಮಾತನಾಡಿ, ‘2500 ಷೇರುದಾರರ ಸಹಕಾರದಿಂದ ಸಂಸ್ಥೆಯಲ್ಲಿ 20 ಕೋಟಿಗಿಂತಲೂ ಹೆಚ್ಚು ದುಡಿಯುವ ಬಂಡವಾಳವಿದೆ. ಸಂಸ್ಥೆ ಈ ವರ್ಷ 26.34 ಲಕ್ಷ ಲಾಭದದಲ್ಲಿದೆ.

ಅಡಿಟ್ ವರದಿಯಲ್ಲಿ ಪ್ರತಿವರ್ಷದಂತೆ ಈ ವರ್ಷವು ‘ಅ’ ವರ್ಗ ಬಂದಿದ್ದು, ಈ ವರ್ಷ ಷೇರುದಾರರಿಗೆ ಶೇ 10ರಷ್ಟು ಡಿವಿಡೆಂಡ್ ವಿತರಿಸಲಾಗುವುದು. ಷೇರುದಾರರ ಮಕ್ಕಳ ಉನ್ನತ ವ್ಯಾಸಂಗಕ್ಕೆ ಪ್ರೋತ್ಸಾಹ ಧನ ನೀಡುವುದನ್ನು ಮುಂದುವರೆಸಲಾಗುವುದು’ ಎಂದರು.

ಕಟಕೋಳ ಶಾಖೆಯ ಸಲಹಾ ಸಮಿತಿ ಅಧ್ಯಕ್ಷ ಎಂ.ಎಂ. ಆತಾರ, ಯರಗಟ್ಟಿ ಶಾಖೆಯ ಸಲಹಾ ಸಮಿತಿ ಅಧ್ಯಕ್ಷ ಜಕಾತಿ, ನಿರ್ದೇಶಕ ಶಿವಣ್ಣ ಅಂಗಡಿ, ಅರುಣ ಶಿದ್ಧಿಬಾವಿ, ಮನೋಹರ ಹೊನ್ನುಂಗರ, ಮಧು ಜಂಬಗಿ, ದೀಪಕ ಆರಿಬೆಂಚಿ, ಕೃಷ್ಣಾ ಮೇದಾರ, ನಿರ್ದೇಶಕ ಎಸ್.ಎಂ. ಸಕ್ರಿ, ಜಗದೀಶ, ಕಾರ್ಯದರ್ಶಿ ಎಂ.ಎಸ್. ಕುರಬೇಟ, ಬಾಲಮುಕುಂದ ಇದ್ದರು.

# ದುಶ್ಚಟಗಳಿಗೆ ಬಲಿಯಾಗದಿರಿ ಎಂದು ವಿದ್ಯಾರ್ಥಿಗಳಿಗೆ ಸಲಹೆ



ಹರಪನಹಳ್ಳಿ: ವಿದ್ಯಾರ್ಥಿಗಳು ಸಾಮಾಜಿಕ ಜಾಲತಾಣದ ಪ್ರಭಾವದಿಂದ ದುಶ್ಚಟಗಳಿಗೆ ಬಲಿಯಾಗುತ್ತಿರುವುದು ವಿಷಾದನೀಯ ಎಂದು ವಕೀಲರ ಸಂಘದ ಅಧ್ಯಕ್ಷ ವೆಂಕಟೇಶ್ ಎಂದು ಹೇಳಿದರು.

ಶರಣಬಸವ ಬುದ್ಧ ಭೀಮಜಿ ವಿದ್ಯಾ ಸಂಸ್ಥೆ (ರಿ)ಯ ನಿಸರ್ಗ ಪದವಿ ಪೂರ್ವ ಕಾಲೇಜಿನಲ್ಲಿ 2026–27ನೇ ಸಾಲಿನ ಸಾಂಸ್ಕೃತಿಕ ಸಂಘಗಳ ಉದ್ಘಾಟನೆ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ನಿವೃತ್ತ ಪ್ರಾಧ್ಯಾಪಕ ಎಸ್. ಶಿವಾನಂದ, ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ ಪೂರಕವಾದ ಆದರ್ಶ ವ್ಯಕ್ತಿಗಳ ಕಥೆಗಳು ಹಾಗೂ ದಾರ್ಶನಿಕರ ಜೀವನ ಚರಿತ್ರೆಗಳನ್ನು ಓದಿ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಿ ಎಂದು ಸಲಹೆ ನೀಡಿದರು.

ಪ್ರತಿಭಾವಂತ ವಿದ್ಯಾರ್ಥಿಗಳು, ಗೊಂಗಡಿ ನಾಗರಾಜ್, ಎನ್.ಪ್ರಕಾಶ್ ಸನ್ಮಾನಿಸಲಾಯಿತು. ಸಂಸ್ಥೆಯ ಅಧ್ಯಕ್ಷ ಗುಂಡಗತ್ತಿ ಕೆ.ಕೊಟ್ರೇಶ್, ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಕಾರ್ಯದರ್ಶಿ ಗುಂಡಗತ್ತಿ ಕೆ.ಕೊಟ್ರಪ್ಪ ಮಾತನಾಡಿದರು.

ಆಡಳಿತಾಧಿಕಾರಿ ಶೃತಿ, ರಾಜು ಯಲಿಗಾರ್, ಪ್ರಾಂಶುಪಾಲ ಎಚ್.ಕೆ.ಕಲ್ಯಾಣದವರ್, ಉಪ ಪ್ರಾಂಶುಪಾಲ ಎಚ್.ಮೋಹನ್, ಕೆ.ಶಾಂತರಾಜ್, ಬಸವಂತಪ್ಪ, ಬಣಕಾರ ರಾಜಶೇಖರ, ಎಚ್.ಬಸವರಾಜ್ ಇದ್ದರು.

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.